ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 75 Issue - 75 | RNI No.KARKAN/2018/77805 POST NO. KA/SK/MND/999/2019-2021 | ಭಾನುವಾರ Sunday | 27-06-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|




# ಮಂಡ್ಯ : ವಾರಾಂತ್ಯ ಕರ್ಫ್ಯೂ ಯಶಸ್ವಿ

## ವಾಹನ ಸಂಚಾರಕ್ಕೆ ತಡೆ ಇಲ್ಲ : ಕರೋನಾ ತಡೆಗೆ ಜನಸ್ಪಂದನೆ



ಮಂಡ್ಯ: ನಗರದ ಸೇರಿದಂತೆ ಜಿಲ್ಲೆಯಾದ್ಯಂತ ಶನಿವಾರ ವಾರಾಂತ್ಯ ಕರ್ಫ್ಯೂ ಅಂಗವಾಗಿ ಅಗತ್ಯ ವಸ್ತುಗಳ ಅಂಗಡಿಗಳನ್ನು ಹೊರತುಪಡಿಸಿ, ಮಿಕ್ಕೆಲ್ಲಾ ಅಂಗಡಿಗಳು ಮುಚ್ಚಿದ್ದವು. ಆದರೆ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿ ಸೇರಿ ವಿವಿಧೆಡೆ ವಾಹನ ಸಂಚಾರ ಎಂದಿನಂತಿತ್ತು.

ನಿಯಮ ಉಲ್ಲಂಘಿಸಿ ರಸ್ತೆಗಿಳಿದ ವಾಹನಗಳನ್ನು ತಪಾಸಣೆ ನಡೆಸಿ ಪೊಲೀಸರು ದಂಡ ವಿಧಿಸಿದರು. ದಿನಸಿ, ತರಕಾರಿ, ಮಾಂಸದ ಅಂಗಡಿಗಳು, ಹಾಲಿನ ಕೇಂದ್ರಗಳು ಮಧ್ಯಾಹ್ನ 2ರವರೆಗೆ ತೆರೆದಿದ್ದವು. ಔಷಧ ಅಂಗಡಿ, ವೈದ್ಯಕೀಯ ಸೇವೆಗಳು ಪೂರ್ಣವಾಗಿ ಲಭ್ಯವಿತ್ತು. ವಾರಾಂತ್ಯ ಕರ್ಫ್ಯೂ ಹಿನ್ನೆಲೆಯಲ್ಲಿ ಜನರು ಏನೂ ತೆರೆದಿರುವುದಿಲ್ಲ ಎಂದು ಮನೆಯಲ್ಲೇ ಇದ್ದರು. ಇದರಿಂದ ದಿನಸಿ ಅಂಗಡಿ, ಮಾಂಸದಂಗಡಿಗಳು ಬಿಕೋ ಎನ್ನುತ್ತಿದ್ದವು.

'ಅಂಗಡಿ ತೆರೆಯಲು ಅನುಮತಿ ನೀಡಿದ್ದರೂ ವಾರಾಂತ್ಯ ಸಂಪೂರ್ಣ ಲಾಕ್‌ಡೌನ್ ಎಂದು ಜನರು ಸರಿಯಾಗಿ ಬರುತ್ತಿಲ್ಲ. ಅನುಮತಿ ನೀಡಿರುವ ಬಗ್ಗೆ ಜನರಿಗೆ ಪೊಲೀಸರು ಮಾಹಿತಿ ನೀಡಿಲ್ಲ. ಜಿಲ್ಲಾಧಿಕಾರಿ ಈ ಬಗ್ಗೆ ಯಾವುದೇ ಆದೇಶ ಹೊರಡಿಸಿಲ್ಲ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಕ್ರವಾರ ರಾತ್ರಿ 10 ಗಂಟೆ ನಂತರ ವಿಡಿಯೊ ಹೇಳಿಕೆ ನೀಡಿದ್ದಾರೆ. ಸರಿಯಾಗಿ ತಿಳಿಸಿದ್ದರೆ ಸಲ್ಪ ವ್ಯಾಪಾರವಾದರೂ ಆಗುತ್ತಿತ್ತು. ಆದರೆ ಈಗ ಜನರನ್ನು ಕಾಯುವಂತಾಗಿದೆ' ಎಂದು ನೂರಡಿ ರಸ್ತೆಯ ದಿನಸಿ ಅಂಗಡಿ ವ್ಯಾಪಾರಿಯೊಬ್ಬರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪೇಟೆಬೀದಿಯಲ್ಲಿ ದಿನಸಿ ಅಂಗಡಿಗಳು ತೆರೆದಿದ್ದವು. ಉಳಿದಂತೆ ಬಟ್ಟೆ, ಎಲೆಕ್ಟ್ರಿಕಲ್, ಕಬ್ಬಿಣ, ಜ್ಯುವೆಲರಿ ಅಂಗಡಿಗಳು ಮುಚ್ಚಿದ್ದವು. ವಿವಿರಸ್ತೆಯಲ್ಲಿನ ಕೆಲವು ದಿನಸಿ ಅಂಗಡಿಗಳು ತೆರೆದಿದ್ದವು, ಉಳಿದಂತೆ ಆಟೊ ಮೊಬೈಲ್, ಗ್ಯಾರೇಜ್ ಸೇರಿದಂತೆ ವಾಣಿಜ್ಯ ಅಂಗಡಿಗಳು ಮುಚ್ಚಿದ್ದವು. ಹೋಟೆಲ್‌ಗಳಲ್ಲಿ ಕೇವಲ ಪಾರ್ಸಲ್‌ಗೆ ಅವಕಾಶ ನೀಡಲಾಗಿತ್ತು. ಕುಳಿತು ತಿನ್ನುವುದಕ್ಕೆ ಅವಕಾಶ ಇರಲಿಲ್ಲ.

**ಬಿಕೋ ಎನ್ನುತ್ತಿದ್ದ ಬಸ್ ನಿಲ್ದಾಣ**

ವಾರಾಂತ್ಯ ಕರ್ಫ್ಯೂ ಇದ್ದರೂ ಬಸ್ ಸಂಚಾರಕ್ಕೆ ಯಾವುದೇ ತಡೆ ಇರಲಿಲ್ಲ. ಜನರ ಅಗತ್ಯತೆಗೆ ತಕ್ಕಂತೆ ವಾಹನಗಳನ್ನು ಮಾರ್ಗಗಳಲ್ಲಿ ಇಳಿಸಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದರು. ಆದರೂ ನಿರೀಕ್ಷಿತ ಪ್ರಮಾಣದಲ್ಲಿ ಜನರು ಬಾರದ ಕಾರಣ ಶನಿವಾರ 49 ಬಸ್‌ಗಳು ಮಾತ್ರ ಮಂಡ್ಯ ವಿಭಾಗದಿಂದ ಸಂಚರಿಸಿದವು.

'ಎಲ್ಲಾ ಘಟಕಗಳಿಂದ ಬೆಂಗಳೂರು, ಮಳವಳ್ಳಿ ಮಂಡ್ಯ, ಮಳವಳ್ಳಿ ಕನಕಪುರ–ಬೆಂಗಳೂರು ಮಾರ್ಗದಲ್ಲಿ ಬಸ್‌ಗಳು ಸಂಚರಿಸಿದವು. ಲಾಕ್‌ಡೌನ್ ತೆರವುಗೊಂಡ ನಂತರ 180 ಬಸ್‌ಗಳು ನಿತ್ಯವೂ ಸಂಚರಿಸುತ್ತಿದ್ದವು. ಸೋಮವಾರದಿಂದ ಮೈಸೂರಿಗೂ ಸಂಚರಿಸಲು ಅನುಮತಿ ಸಿಕ್ಕಿದ್ದು, ಮಾರ್ಗಗಳು–ಬಸ್‌ಗಳ ಸಂಖ್ಯೆಯಲ್ಲಿ ಹೆಚ್ಚಳವಾಗಲಿದೆ' ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಕಿರಣ್‌ಕುಮಾರ್ ತಿಳಿಸಿದರು.

# ಮಾದಕ ವ್ಯಸನದಿಂದ ಮುಕ್ತರಾಗಲು ಕರೆ

## ದ್ರವ್ಯ ಸೇವನೆ ವಿರುದ್ಧ ಆರೋಗ್ಯ ಇಲಾಖೆ ಆಂದೋಲನ

ಮಂಡ್ಯ : ಆರೋಗ್ಯವಂತ ಸಮಾಜ ನಿರ್ಮಾಣದ ಹೊಣೆ ಪ್ರತಿಯೊಬ್ಬರದಾಗಿದ್ದು, ದುಶ್ಚಟಗಳಿಂದ ದೂರಾಗುವ ಮೂಲಕ ಉತ್ತಮ ಹವ್ಯಾಸ, ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಟಿ ಎನ್ ಧನಂಜಯ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮನೋರೋಗ ವಿಭಾಗ ಮಿಮ್ಸ್ ಮಂಡ್ಯ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಕಳ್ಳಸಾಗಣೆ ವಿರುದ್ಧ ಅಂತರಾಷ್ಟ್ರೀಯ ದಿನಾಚರಣೆಯಲ್ಲಿ ಮಾತನಾಡಿದ ಅವರು, ಮಾದಕ ದ್ರವ್ಯ ಸೇವನೆ ಮತ್ತು ಅಕ್ರಮ ಸಾಗಾಟ ಇದರ ಬಗ್ಗೆ ಜಾಗೃತಿ ಮೂಡಿಸಲು 1987 ರಿಂದ ವಿಶ್ವಾದ್ಯಂತ ಈ ದಿನವನ್ನು ಆಚರಿಸಿಕೊಂಡು ಬಂದಿದ್ದೇವೆ ಎಂದರು.

ಇತ್ತೀಚಿನ ದಿನಗಳಲ್ಲಿ ಯುವ ಜನರು ಹೆಚ್ಚು ಮಾದಕ ದ್ರವ್ಯ ವ್ಯಸನ ಕ್ಕೆ ಒಳಗಾಗುತ್ತಿದ್ದಾರೆ,



ಅನೇಕ ಸಂದರ್ಭದಲ್ಲಿ ಅನೇಕ ಅಪರಾಧಗಳು ನಡೆದಾಗ ಅವರು ಮಾದಕದ್ರವ್ಯ ಸೇವನೆಯ ದಾಸರಾಗಿ ಅಪರಾಧವನ್ನು ಮಾಡಿದ್ದಾರೆ ಎಂಬುವುದು ಬೆಳಕಿಗೆ ಬಂದಿದೆ, ಹಿಂದೆ ಸಿನಿಮಾಗಳಲ್ಲಿ ನೋಡುತ್ತಿದ್ದ ವ್ಯಸನ ಇಂದು ಕಾಲೇಜುಗಳಲ್ಲಿ, ಶಾಲೆಗಳಲ್ಲಿ, ಬೀದಿಗಳಲ್ಲಿ, ಗ್ರಾಮಮಟ್ಟದಲ್ಲಿ ಬಂದಿರುವುದು ವಿಪರ್ಯಾಸ ಎಂದರು.

ಈ ವ್ಯಸನವೂ ಅಲ್ಲಕ್ಷಣದ ಖುಷಿಗೋಸ್ಕರ ಅಥವಾ ಕುತೂಹಲದಿಂದ ಬಂದಿದ್ದು, ಇದು ಚಟವಾಗಿ ಸಮಾಜಕ್ಕೆ ಮಾರಕವಾಗಿದೆ ಎಂದರು.

ವ್ಯಸನದಿಂದ ಅನೇಕ ಅಪರಾಧಪ್ರಕರಣಗಳು ನಡೆದಿದ್ದು, ಇವೆಲ್ಲಕ್ಕೂ ಅಂತ್ಯ ಹಾಡಲೇಬೇಕು, ಹಾಗಾಗಿ ಮುಂದೆ ಈ ದೇಶದ ಭವಿಷ್ಯ ಉಜ್ವಲವಾಗಿಸಲು, ಮಾದಕ ವ್ಯಸನದ ಬಗ್ಗೆ ಜಾಗೃತಿ ಆಗಬೇಕಾಗಿದೆ, ಈ ನಿಟ್ಟಿನಲ್ಲಿ ಈ ಜಾಗೃತಿ ಜಾಥಾವು ಯಶಸ್ವಿಯಾಗಲಿ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಅಪಾರ ಪೊಲೀಸ್ ವರಿಷ್ಠಾಧಿಕಾರಿ ಧನಂಜಯ ವಿ ಹಾಗೂ ಜಿಲ್ಲಾ ಮಾನಸಿಕ ಕಾರ್ಯಕ್ರಮಾದಿಕಾರಿ ಡಾ.ಕೆ.ಪಿ.ಅಶ್ವತ್ಥ್ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಡಾ.ಶಶಿಧರ್ ಬಸವರಾಜ್ ಜಿ, ಆಖಿಔ ಡಾ.ಅನಿಲ್‌ಕುಮಾರ್ ಮತ್ತು ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ: ಶಶಿಧರ್ ಹಾಗೂ ಮನರೋಗತಜ್ಞರಾದ ಡಾ: ಶಶಾಂಕ್, ಮಂಡ್ಯ ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಜವರೆಗೌಡ ಡಾ: ಚಂದ್ರಶೇಖರ್, DHEO ಡಾ: ವೇಣುಗೋಪಾಲ್, ಹಾಗೂ ರಾಘವೇಂದ್ರ, ಗೋವಿಂದರಾಜು, ಚಿಕ್ಕರಸೇಗೌಡ, ಸುಹೇಲ್ ಸನತ್ ಇದ್ದರು.

**ದಿನಾಚರಣೆ :** ಧ್ವನಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಇವರ ವತಿಯಿಂದ ಧ್ವನಿ ಮದ್ಯವರ್ಜನ ಕೇಂದ್ರದ ಆವರಣದಲ್ಲಿ ನಡೆದ ವಿಶ್ವ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಬಿಜೆಪಿ ರಾಜ್ಯ ಪರಿಷತ್ ಸದಸ್ಯ ಡಾ.ಸಿದ್ದರಾಮಯ್ಯ ಮಾತನಾಡಿ, ಧ್ವನಿ ಗ್ರಾಮೀಣಾಭಿವೃದ್ಧಿ ಸಂಸ್ಥೆಫಿ ಇವರ ವತಿಯಿಂದ ಧ್ವನಿ ಮದ್ಯವರ್ಜನ ಕೇಂದ್ರದ ಆವರಣದಲ್ಲಿ ನಡೆದ ವಿಶ್ವ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಾದಕ ದ್ರವ್ಯಗಳ ಸೇವನೆಯಿಂದ ಸಮಾಜಕ್ಕೆ ಕೆಟ್ಟ ಸಂದೇಶ ರವಾನೆಯಾಗುತ್ತದೆ. ಇದು ಕುಟುಂಬದ ಮೇಲೂ ಪರಿಣಾಮ ಬೀರುತ್ತದೆ ಎಂದು ಅಭಿಪ್ರಾಯಿಸಿದರು.

ನಿವೃತ್ತ ಡಿಎಚ್‌ಓ ಡಾ. ಸಿ. ಶಿವರಾಮಯ್ಯ ಅಧ್ಯಕ್ಷತೆ ವಹಿಸಿದ್ದರು. ನಗರಸಭಾ ಸದಸ್ಯೆ ಎಂ.ಎಸ್. ಪೂರ್ಣಿಮಾ, ಬಿಜೆಪಿ ಮುಖಂಡ ಕೆ.ನಾಗಣ್ಣಗೌಡ ಇತರರು ಭಾಗವಹಿಸಿದ್ದರು.

## ಸಾರ್ವಜನಿಕರಿಗೆ ಕೋವಿಡ್ ಲಸಿಕೆ

ಕೆ.ಆರ್.ಪೇಟೆ : ತಾಲ್ಲೂಕಿನ ಕೊರಟೀಕೆರೆ ಗೇಟ್‌ನಲ್ಲಿರುವ ಶ್ರೀ ಚನ್ನಕೇಶವ ಅನುಧಾನಿತ ಪ್ರೌಢಶಾಲೆಯಲ್ಲಿ ಮಾರೇನಹಳ್ಳಿ ಹರಿಯಾಲದಮ್ಮ ದೇವಸ್ಥಾನ ಸಂತೆಮೈದಾನದಲ್ಲಿರುವ ಸರ್ಕಾರಿ ಆಸ್ಪತ್ರೆಯ ವತಿಯಿಂದ ಸಾರ್ವಜನಿಕರಿಗೆ ಕೋವಿಡ್ ಲಸಿಕೆ ಹಾಕಲಾಯಿತು.

# ಮೈಷುಗರ್ ಖಾಸಗೀಕರಣ ಪ್ರಗತಿಪರರ ವಿರೋಧ



ಮಂಡ್ಯ : ಮೈಶುಗರ್ ಕಂಪನಿಯನ್ನು ಸರಕಾರ 40 ವರ್ಷದವರೆಗೆ ಖಾಸಗಿಯವರಿಗೆ ವಹಿಸುವ ಟೆಂಡರ್ ಪ್ರಕ್ರಿಯೆ ರದ್ದುಪಡಿಸಿ ಸರ್ಕಾರಿ ಸ್ವಾಮ್ಯದಲ್ಲಿಯೇ ನಿರ್ವಹಣೆ ಮಾಡಬೇಕೆಂದು

ಮಂಡ್ಯ ಜಿಲ್ಲಾ ಹಿತರಕ್ಷಣ ಸಮಿತಿ ಸಭೆ, ರೈತ, ದಲಿತ, ಕಾರ್ಮಿಕ, ಮಹಿಳಾ, ಪ್ರಗತಿಪರ ಸಂಘಟನೆಗಳು ಒತ್ತಾಯಿಸಿವೆ.

ನಗರದ ಗಾಂಧಿಭವನದಲ್ಲಿ ನಡೆದ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಟಿ ಶ್ರೀಕಂಠೇಗೌಡ ಮಾತನಾಡಿ, ಈ ಕೂಡಲೇ ಖಾಸಗೀಕರಣದ ನಿರ್ಧಾರವನ್ನು ಸರ್ಕಾರ ಕೈ ಬಿಡಬೇಕೆಂದು ಆಗ್ರಹಿಸಿದರು.

ಖಾಸಗೀಕರಣ ವಿರೋಧಿಸಿ ಅನಿರ್ದಿಷ್ಟ ಧರಣಿ ನಡೆಸಲು ಸಭೆ ನಿರ್ಧರಿಸಿತು. ವಿವಿಧ ಸಂಘಗಳು ಹಾಗೂ ಜನಪ್ರತಿನಿಧಿಗಳ ಸಭೆಯನ್ನು ಜುಲೈ 1ರಂದು 10 ಗಂಟೆಗೆ ಮಂಡ್ಯ ಪ್ರವಾಸಿ ಮಂದಿರದಲ್ಲಿ ಸಭೆ ನಡೆಸಿ ಅದೇ ದಿನ 'ಮೈಶುಗರ್ ಕಾರ್ಖಾನೆ ಮಾರಟಕ್ಕಿಲ್ಲ, ಸರ್ಕಾರಿ ಸ್ವಾಮ್ಯ ದಲ್ಲಿ ನಿರ್ವಹಣೆ ಆಗಬೇಕೆಂದು ಬರಹಗಳ ಪ್ಲೇಕಾರ್ಡುಗಳನ್ನು ಕಾರ್ಖಾನೆ ಆವರಣದಲ್ಲಿ ಅಂಟಿಸುವ ಪ್ರತಿಭಟನೆ ಹಮ್ಮಿಕೊಳ್ಳಲು ಸಭೆ ತೀರ್ಮಾನಿಸಿತು.

ರೈತ ಸಂಘದ ಸುನಂದ ಜಯರಾಮ್, ಇಂಡುವಾಳು ಚಂದ್ರಶೇಖರ್, ಮುದ್ದೇಗೌಡ, ಅಖಂಡ ಕರ್ನಾಟಕ ರೈತಸಂಘದ ರಾಜ್ಯ ಪ್ರಾಧನಕಾರ್ಯದರ್ಶಿ ಕೆ.ಎಸ್.ಸುಧೀರ್‌ಕುಮಾರ್, ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ, ವಿನಯ್, ಬೋರಲಿಂಗಯ್ಯ, ಕಿರಂಗೂರು ಪಾಪು, ಬೊಮ್ಮೆಗೌಡ ಭಾಗವಹಿಸಿದರು.

## ವಿದ್ಯಾರ್ಥಿಗಳ ಲಸಿಕಾ ಅಭಿಯಾನಕ್ಕೆ ವಿಜಯಾನಂದ ಚಾಲನೆ

ಮಂಡ್ಯ : ನಗರದ ಪಿಇಎಸ್ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನಡೆದ ಕಾಲೇಜು ವಿದ್ಯಾರ್ಥಿಗಳ ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ಪಿಇಟಿ ಅಧ್ಯಕ್ಷ ಕೆ.ಎಸ್.ವಿಜಯಾನಂದ ಚಾಲನೆ ನೀಡಿ ಮಾತನಾಡಿದರು.

ಇತ್ತೀಚೆಗೆ ಜಿಲ್ಲಾಧಿಕಾರಿ ತಮ್ಮ ಕಚೇರಿ ಸಭಾಂಗಣದಲ್ಲಿ ಎಲ್ಲ ಕಾಲೇಜುಗಳ ಪ್ರಾಂಶುಪಾಲರ ಸಭೆ ನಡೆಸಿ ಲ್ಲ ವಿದ್ಯಾರ್ಥಿಗಳಿಗೂ ವಾರ ಅಥವಾ 15 ದಿನಗಳೊಳಗೆ ಕೋವಿಡ್ ಲಸಿಕೆ ಕೊಡಿಸುವಂತೆ ಸೂಚಿಸಿದ್ದರು. ಅದರನ್ವಯ ಆರೋಗ್ಯ ಇಲಾಖೆ ಅಧಿಕಾರಿಗಳು ನಮ್ಮ ಕಾಲೇಜಿನಲ್ಲಿ ಲಸಿಕಾ ಅಭಿಯಾನ ನಡೆಸುತ್ತಿದ್ದಾರೆ ಎಂದರು.

ಲಸಿಕಾ ಅಭಿಯಾನಕ್ಕೆ ಕೈಜೋಡಿಸುವ ಸಲುವಾಗಿ ಈಗಾಗಲೇ ನಮ್ಮ ಕಾಲೇಜಿನ ಪದವಿ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವಾಟ್ಸಾಪ್ ಮೂಲಕ ಮೆಸೇಜ್ ಕಳುಹಿಸಲಾಗಿತ್ತುಫಿ. ಅದರಂತೆ ವಿದ್ಯಾರ್ಥಿಗಳೂ ಸಹ ಕಾಲೇಜಿಗೆ ಬಂದಿದ್ದಾರೆ. ಎಲ್ಲರಿಗೂ ಲಸಿಕೆ ಹಾಕಲು ಸಿದ್ಧತೆ ನಡೆಸಲಾಗಿದೆ ಎಂದು ಹೇಳಿದರು.

ಪೋಷಕರು ಮಕ್ಕಳಿಗೆ ಲಸಿಕೆ ಹಾಕಿಸುವತ್ತ ಗಮನ ನೀಡಿ. ಲಸಿಕೆ ಹಾಕಿಸುವುದರಿಂದ ಯಾವುದೇ ತೊಂದರೆಯೂ ಆಗುವುದಿಲ್ಲಫಿ. ಭಯ ಬೇಡ, ಮೊದಲು ಎಲ್ಲರಿಗೂ ಲಸಿಕೆ ಹಾಕಿಸಿ, ನಂತರ ಕಾಲೇಜಿಗೆ ಮಕ್ಕಳನ್ನು ಕಳುಹಿಸಬೇಕು ಎಂದು ಕರೆ ನೀಡಿದರು.

ಕೊರೋನಾ ವಿರುದ್ಧ ಲಸಿಕೆ ಅಭಿಯಾನದೊಂದಿಗೆ ಕೈಜೋಡಿಸಿ ಕೊರೋನಾ ಮುಕ್ತ ನಾಡನ್ನಾಡಿ ಮಾಡಲು ಎಲ್ಲರೂ ಸಹಕಾರ ನೀಡಿ ಎಂದು ಮನವಿ ಮಾಡಿದರು.

ಪಿಇಟಿ ಸಂಸ್ಥೆಯ ಸಹ ಕಾರ್ಯದರ್ಶಿ ದಯಾನಂದ ಇತರರು ಕಾರ್ಯಕ್ರಮದಲ್ಲಿ ಇದ್ದರು.

# ಮಾದಕ ವ್ಯಸನಿಗಳ ಸಂಖ್ಯೆ ಹೆಚ್ಚಳ : ವಿಷಾದ

ಮಂಡ್ಯ: ಪ್ರಸ್ತುತ ದಿನಗಳಲ್ಲಿ ಮಾದಕ ವ್ಯಸನಿಗಳ ಸಂಖ್ಯೆ ಹೆಚ್ಚಳವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಕೃಷಿಕ ಲಯನ್ಸ್ ಸಂಸ್ಥೆ ಆಡಳಿತಾಧಿಕಾರಿ ಕೆ.ಟಿ. ಹನುಮಂತು ವಿಷಾಧ ವ್ಯಕ್ತಪಡಿಸಿದರು.

ನಗರದ ಸೇವಾಕಿರಣ ವೃದ್ದಾಶ್ರಮದಲ್ಲಿ ನಂಜಮ್ಮ ಮೋಟೇಗೌಡ ಚಾರಿಟಬಲ್ ಟ್ರಸ್ಟ್ ಕೊಪ್ಪ, ಕೃಷಕ ಲಯನ್ಸ್ ಸಂಸ್ಥೆ, ಪ್ರತಿಭಾಂಜಲಿ ಸುಗಮ ಸಂಗೀತಾ ಅಕಾಡೆಮಿ, ಜಿಲ್ಲಾ ಬೀದಿ ನಾಟಕ ಕಲಾ ತಂಡಗಳ ಒಕ್ಕೂಟ ಇವರ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನ–2021 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ದೇಶದಲ್ಲಿ ಮಾದಕ ವ್ಯಸನಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಮಾದಕತೆಯ ಅಮಲಿಗೆ ಯುವ ಜನತೆ ಹೆಚ್ಚು ಬಲಿಪಶುವಾಗುತ್ತಿದ್ದಾರೆ. ವಾರ್ಷಿಕ ಸುಮಾರು 1 ಲಕ್ಷ ಮಂದಿ ಸಾವಿಗೀಡಾಗುತ್ತಿದ್ದಾರೆ ಎಂದರು.

ವಿಶ್ವಸಂಸ್ಥೆ, ಪ್ರತೀ ವರ್ಷ "ಅಂತಾರಾಷ್ಟ್ರೀಯ ಮಾದಕ ವಸ್ತು ಸೇವನೆ ಮತ್ತು ಕಳ್ಳಸಾಗಣೆ ವಿರೋಧಿ ದಿನವನ್ನು ಆಚರಿಸುತ್ತಿದೆ.



"ಮಾದಕ ದ್ರವ್ಯದ ಬಗೆಗಿನ ನಿಜಾಂಶಗಳನ್ನು ಹಂಚಿಕೊಳ್ಳಿ, ಜೀವ ಉಳಿಸಿ'–ಇದು ಈ ವರ್ಷದ ಧ್ಯೇಯವಾಗಿದೆ ಎಂದರು.

2021ರ ವರದಿಯ ಪ್ರಕಾರ ಜಗತ್ತಿನ 27.5 ಕೋಟಿ ಜನರು ಮಾದಕ ವ್ಯಸನಿಗಳಾಗಿದ್ದು ಇವರಲ್ಲಿ 3.7 ಕೋಟಿ ಜನರು ತತ್ಸಂಬಂಧೀ ರೋಗಗಳಿಂದ ಬಳಲುತ್ತಿದ್ದಾರೆ.

ರಾಜ್ಯದಲ್ಲಿ 50 ಕೋಟಿ ರೂಪಾಯಿ ಮೌಲ್ಯದ ಡ್ರಗ್ಸ್ ನಾಶ ಮಾಡಲಾಗಿದೆ ಎಂದು ಸರ್ಕಾರ ವರದಿ ನೀಡಿದೆ. ಆದರೂ ಕೂಡ ಯುವ ಜನತೆ ಡ್ರಗ್ಸ್‌ಗೆ ಬಲಿಪಶುವಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಡ್ರಗ್ಸ್ ಮಾರುವವರ ವಿರುದ್ಧ ಸಣ್ಣ ಪ್ರಮಾಣದ ಶಿಕ್ಷೆ ಇದ್ದು ಇದನ್ನು ಜೀವಾವಧಿಗೆ ವಿಸ್ತರಿಸಿದರೆ ಸಹಕಾರಿ ಎಂದು ಅಭಿಪ್ರಾಯಿಸಿದರು.

ಇದೇ ಸಂದರ್ಭದಲ್ಲಿ ಬೀದಿಬದಿ ನಾಟಕ ಕಲಾವಿದರಿಗೆ ಇಸ್ಕಾನ್ ಸಂಸ್ಥೆ ವತಿಯಿಂದ ಆಹಾರ ಕಿಟ್‌ಗಳನ್ನು ವಿತರಣೆ ಮಾಡಲಾಯಿತು. ಸ್ಥಳೀಯ ಗಾಯಕರ ತಂಡವೂ ಜಾನಪದ, ಭಾವಗೀತೆ, ರಂಗಗೀತೆ ಮತ್ತು ಜಾಗೃತಿ ಗೀತೆಗಳನ್ನು ಹಾಡುವ ಮೂಲಕ ಮನರಂಜನೆ ನೀಡಿದರು.

ಕಾರ್ಯಕ್ರಮದಲ್ಲಿ ಕೃಷಿಕ ಲಯನ್ಸ್ ಸಂಸ್ಥೆ ಅಧ್ಯಕ್ಷ ಶಶಿಧರ್ ಈಚಗೆರೆ, ಕಾರ್ಯದರ್ಶಿ ಮೋಹನ್ ಕುಮಾರ್, ಸ್ಪಂದನ ಟ್ರಸ್ಟ್ ಅಧ್ಯಕ್ಷ ಗೊರವಾಲೆ ಚಂದ್ರಶೇಖರ್, ಜಾನಪದ ಗಾಯಕ ಸಂತೆಕಸಲಗೆರೆ ಬಸವರಾಜು, ಹನಿಯಂಬಾಡಿ ಶೇಖರ್, ಮಂಜುಳಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಮಂಡ್ಯ ಪಿಇಎಸ್ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ನಡೆದ ಕಾಲೇಜು ವಿದ್ಯಾರ್ಥಿಗಳ ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ಪಿಇಟಿ ಅಧ್ಯಕ್ಷ ಕೆ.ಎಸ್.ವಿಜಯಾನಂದ ಚಾಲನೆ ನೀಡಿದರು.

## ರೈತ ವಿರೋಧಿ ಮಸೂದೆ ವಿರೋಧಿಸಿ ಪ್ರತಿಭಟನೆ

ಮದ್ದೂರು : ರೈತ ವಿರೋಧಿ ಮಸೂದೆಗಳನ್ನು ಹಿಂಪಡೆಯುವಂತೆ ಹಾಗೂ ರೈತರು ಬೆಳೆದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡುವಂತೆ ಒತ್ತಾಯಿಸಿ ರೈತ ಸಂಘದ ಕಾರ್ಯಕರ್ತರು ಶಿವಪುರದ ಧ್ವಜ ಸತ್ಯಾಗ್ರಹ ಸೌಧದ ಬಳಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಶಿವಪುರದ ಧ್ವಜ ಸತ್ಯಾಗ್ರಹ ಸೌಧದ ಬಳಿ ಜಮಾವಣೆಗೊಂಡ ಸಂಘಟನೆ ಕಾರ್ಯಕರ್ತರು ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರಲ್ಲದೇ ರೈತ ವಿರೋಧಿ ಕೃಷಿ ಮಸೂದೆಗಳನ್ನು ಹಿಂಪಡೆಯುವಂತೆ ಆಗ್ರಹಿಸಿದರು.


ಕಳೆದ 6 ತಿಂಗಳಿಂದಲೂ ದೆಹಲಿಯಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದರೂ ಕೇಂದ್ರ ಸರ್ಕಾರ ಪ್ರತಿಭಟನಾ ನಿರತರೊಂದಿಗೆ ಸೌಜನ್ಯಕ್ಕೂ ಭೇಟಿ ಮಾಡದೆ ನಿರ್ಲಕ್ಷ್ಯ ತಾಳಿದ್ದು ಕೃಷಿ, ವಿದ್ಯುತ್, ಎಪಿಎಂಸಿಗಳನ್ನು ಖಾಸಗೀಕರಣಗೊಳಿಸಲು ಮುಂದಾದಲ್ಲಿ ರೈತರಿಗೆ ಅನ್ಯಾಯವಾಗಲಿದೆ ಎಂದು ಆರೋಪಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ನೇತೃತ್ವದ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದ್ದು ರೈತರು, ಕಾರ್ಮಿಕರು ಹಾಗೂ ಹಿಂದುಳಿದ ವರ್ಗದವರಿಗೆ ಯಾವುದೇ ಯೋಜನೆಗಳನ್ನು ಜಾರಿಗೊಳಿಸದೆ ನಿರ್ಲಕ್ಷ್ಯ ವಹಿಸಿದ್ದು ಕೊರೋನಾ ವೈರಸ್ ಹಾಗೂ ಲಾಕ್‌ಡೌನ್‌ನಿಂದಾಗಿ ರಾಜ್ಯದ ಜನ ಸಂಕಷ್ಟದಲ್ಲಿದ್ದು ಕೂಡಲೇ ಬಡವರ್ಗದವರ ನೆರವಿಗೆ ಧಾವಿಸುವಂತೆ ಆಗ್ರಹಿಸಿದರು.

ಪ್ರತಿಭಟನೆ ವೇಳೆ ಸಂಘಟನೆ ತಾಲೂಕು ಅಧ್ಯಕ್ಷ ಆರ್.ಎಸ್. ಸೀತಾರಾಂ, ಪದಾಧಿಕಾರಿಗಳಾದ ಜಿ.ಎ.ಶಂಕರ್, ವರದರಾಜು, ಕೀಳಘಟ್ಟ ನಂಜುಂಡಯ್ಯ, ಗೊಲ್ಲರದೊಡ್ಡಿ ಅಶೋಕ್, ಪುಟ್ಟಸ್ವಾಮಿ, ವೆಂಕಟೇಶ್, ರವಿ, ರಮೇಶ್ ನೇತೃತ್ವ ವಹಿಸಿದ್ದರು.

## ಮಂಡ್ಯ ಕೊರೊನಾ ಮೀಟರ್

**ಕೊರೋನಾ ಸೋಂಕು : 134 – ಸಾವು : 01**



ಮಂಡ್ಯ : ಜಿಲ್ಲೆಯ ವಿವಿಧ ತಾಲ್ಲೂಕುಗಳ 134 ಮಂದಿಗೆ ಶನಿವಾರ ಕೊರೋನಾ ಸೋಂಕು ದೃಢಪಟ್ಟಿದ್ದು, 1 ಮಂದಿ ಕೋವಿಡ್‌ನಿಂದ ಮೃತಪಟ್ಟಿದ್ದಾರೆ. ರೋಗಿಗಳಿಗೆ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ.

ಮಂಡ್ಯ–36, ಮದ್ದೂರು–17, ಮಳವಳ್ಳಿ–10, ಪಾಂಡವಪುರ–11, ಶ್ರೀರಂಗಪಟ್ಟಣ–17, ಕೆ.ಆರ್.ಪೇಟೆ–19 ನಾಗಮಂಗಲ–24 ಮಂದಿಗೆ ಕೊರೋನಾ ಸೋಂಕು ಕಾಣಿಸಿಕೊಂಡಿದೆ. ಈ ದಿನ 233 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.

ಜಿಲ್ಲೆಯಲ್ಲಿ 1433 ಸಕ್ರಿಯ ಪ್ರಕರಣಗಳಿವೆ. ಸರ್ಕಾರಿ ಆಸ್ಪತ್ರೆಯಲ್ಲಿ 248, ಕೋವಿಡ್‌ಕೇರ್ ಸೆಂಟರ್‌ನಲ್ಲಿ 475, ಖಾಸಗಿ ಆಸ್ಪತ್ರೆಯಲ್ಲಿ 32 ಮನೆಯಲ್ಲಿ 678 ಮಂದಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಪುಟ–2

ಕ್ರಾಂತಿಯಕಿಡಿ

ಕಾಯಕಯೋಗಿ

KAYAKAYOGI-MORNING DAILY ಕನ್ನಡ ದಿನಪತ್ರಿಕೆ

ಭಾನುವಾರ
27 ಜೂನ್ 2021

## ವಿದ್ಯುತ್ ಸ್ಪರ್ಶದಿಂದ 2 ಎಕರೆ ಪ್ರದೇಶದ ಕಬ್ಬು ಭಸ್ಮ: ಲಕ್ಷಾಂತರ ರೂ. ನಷ್ಟ

ಪಾಂಡವಪುರ: ಆಕಸ್ಮಿಕವಾಗಿ ವಿದ್ಯುತ್ ತಂತಿ ತಗುಲಿ ಎರಡು ಎಕರೆ ಪ್ರದೇಶದಷ್ಟು ಕಬ್ಬು ಬೆಳೆ ಸುಟ್ಟು ಎರಡೂವರೆ ಲಕ್ಷರೂ ನಷ್ಟವಾಗಿರುವ ಘಟನೆ ತಾಲೂಕಿನ ಹೆಗ್ಗಡಹಳ್ಳಿ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ಹಗ್ಗಡಹಳ್ಳಿ ಗ್ರಾಮದ ರೈತ ಎಚ್.ಸಿ.ಕೆಂಪರಾಜು ಎಂಬುವ ರಿಗೆ ಸೇರಿದ ಎಡರು ಎಕರೆ ಪ್ರದೇಶ ದಷ್ಟು ಕಬ್ಬಿಗೆ ಜಮೀನು ಮೇಲೆ ಹಾದು ಹೋಗಿದ್ದ ವಿದ್ಯುತ್ ತಂತಿ ಯಿಂದ ಆಕಸ್ಮಿಕ ಬೆಂಕಿ ತಗುಲಿ ಕಟಾವು ಹಂತದಲ್ಲಿದ್ದ ಕಬ್ಬು ಬೆಳೆ ನಷ್ಟಕ್ಕೆ ಒಳಗಾಗಿದೆ.

ಹೆಗ್ಗಡಹಳ್ಳಿ ಗ್ರಾಮದ ರೈತ ಎಚ್.ಸಿ.ಕೆಂಪರಾಜು ಅವರಿಗೆ ಸೇರಿದ ಸರ್ವೇ ನಂಬರ್ 69/1ರಲ್ಲಿ ಒಟ್ಟು 3 ಎಕರೆ 20 ಗುಂಟೆ ಜಮೀನಿನಲ್ಲಿ ಕಬ್ಬು ಬೆಳೆದಿದ್ದರು. ಕಟಾವು ಹಂತದಲ್ಲಿದ್ದ ಕಬ್ಬು ಬೆಳೆಗೆ ಕಳೆದ ರಾತ್ರಿ ಜಮೀನು ಮೇಲೆ ಹಾದು ಹೋಗಿದ್ದ ವಿದ್ಯುತ್ ತಂತಿಗಳಿಂದ ಬೆಂಕಿ ತಗುಲಿ ಸುಮಾರು 2 ಎಕರೆ ಪ್ರದೇಶದಷ್ಟು ಕಬ್ಬು ಬೆಳೆ ಸುಟ್ಟು ನಷ್ಟ ಉಂಟಾಗಿದೆ. ಸುಮಾರು ಎರಡೂವರೆ ಲಕ್ಷರೂ ನಷ್ಟಕ್ಕೆ ಒಳಗಾಗಿದೆ.

ಘಟನೆಗೆ ಸಂಬಂಧಪಟ್ಟಂತೆ ನೊಂದ ರೈತ ಎಚ್.ಸಿ.ಕೆಂಪರಾಜು ಪಾಂಡವಪುರ ತಾಲೂಕು ಕಚೇರಿ ಹಾಗೂ ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ಮನವಿ ಸಲ್ಲಿಸಿ ಪರಿಹಾರಕ್ಕಾಗಿ ಒತ್ತಾಯಿಸಿದ್ದಾರೆ.



## 28ರಂದು ಗ್ರಾಪಂಗಳಲ್ಲಿ ಜಾಬ್ ಕಾರ್ಡ್ ಮೇಳ

ಮಂಡ್ಯ : ಗ್ರಾಮೀಣ ಪ್ರದೇಶಗಳಲ್ಲಿ ವಾಸ ಮಾಡುವ ಅರ್ಹ ಕುಟುಂಬಗಳಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಜಾಬ್ ಕಾರ್ಡ್ ವಿತರಿಸಲು ಜೂನ್ 28ರಂದು ಜಿಲ್ಲೆಯ ಎಲ್ಲಾ 233 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 'ಜಾಬ್ ಕಾರ್ಡ್ ಮೇಳ' ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಜಿಆರ್ ಜೆ ದಿವ್ಯಾ ಪ್ರಭು ಅವರು ತಿಳಿಸಿದ್ದಾರೆ.

ಉದ್ಯೋಗ ಚೀಟಿ ಬಯಸುವ ಕುಟುಂಬದಲ್ಲಿನ ವಯಸ್ಕ ಸದಸ್ಯರನ್ನು ಉದ್ಯೋಗ ಚೀಟಿಯಲ್ಲಿ ಸೇರಿಸಬಹುದು ಹಾಗೂ ಹಳೆಯದಾದ ಜಾಬ್ ಕಾರ್ಡ್ ವಾಪಸ್ ನೀಡಿ ಹೊಸ ಜಾಬ್ ಕಾರ್ಡ್ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

'ಗ್ರಾಮಗಳಲ್ಲಿ ಆಟೋಪ್ರಚಾರ ಮತ್ತು ಡಂಗುರ ಸಾರಿಸುವ ಮೂಲಕ ಸೋಮವಾರ ನಡೆಯುವ ಜಾಬ್ ಕಾರ್ಡ್ ಮೇಳದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕ್ರಮವಹಿಸಬೇಕು' ಎಂದು ತಿಳಿಸಿದ್ದಾರೆ.

ಗ್ರಾಮೀಣ ಭಾಗದ ಜನರು ತಮ್ಮ ಮತ್ತು ಕುಟುಂಬ ಸದಸ್ಯರ ಭಾವಚಿತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್ ಬುಕ್ ಮತ್ತು ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಗಳನ್ನು ಹಾಗೂ ಮೊಬೈಲ್ ನಂಬರ್ ಅನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಸಲ್ಲಿಸಿ, ಹೆಸರು ನೊಂದಾಯಿಸಿ ಹೊಸದಾಗಿ ಜಾಬ್ ಕಾರ್ಡ್ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

ಮೇಟ್ ಕಾರ್ಡ್ ವಿತರಣೆ: ಸಮುದಾಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ 25 ಕೂಲಿ ಕಾರ್ಮಿಕರ ಒಂದು ಗುಂಪಿಗೆ ಓದು ಬರಹ ಬಲ್ಲ ಒಬ್ಬ ಕೂಲಿಕಾರರನ್ನು ಕಾಯಕ ಬಂಧುವಾಗಿ ಆಯ್ಕೆ ಮಾಡಿ ಅವರಿಗೆ 'ಮೇಟ್ ಕಾರ್ಡ್' ವಿತರಿಸಲು ಕ್ರಮ ವಹಿಸಲಾಗಿದೆ ಎಂದು ಸಿಇಓ ತಿಳಿಸಿದ್ದಾರೆ.

ಕಾಯಕ ಬಂಧುಗಳಿಗೆ ತರಬೇತಿ: ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಹೆಚ್ಚಿನ ಜನರು ಪ್ರಯೋಜನ ಪಡೆಯುವಂತೆ ಮಾಡಲು ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಕಾಯಕ ಬಂಧುಗಳಿಗೆ ಜಿಲ್ಲಾ ಮಟ್ಟದಲ್ಲಿ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಇದೇ ಜೂ.29ರಂದು ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸಮುದಾಯ ಕಾಮಗಾರಿಗಳನ್ನು ಆರಂಬಿಸುವ ಮೂಲಕ ಅರ್ಹ ಫಲಾನುಭವಿಗಳಿಗೆ ಕೂಲಿ ಕೆಲಸ ಒದಗಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮುಂದಾಗಬೇಕು ಎಂದಿದ್ದಾರೆ.

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ, ವಿಶೇಷ ಚೇತನರು ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ವಾಸ ಮಾಡುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅಲೆಮಾರಿ ಬುಡಕಟ್ಟು ಜನಾಂಗ, ಪ್ರಕಟಣೆಯಿಂದ ತೆಗೆದು ಹಾಕಿದ ಪರಿಶಿಷ್ಟ ಪಂಗಡದವರು, ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು, ಮಹಿಳಾ ಪ್ರಧಾನ ಕುಟುಂಬಗಳು, ಭೂಸುಧಾರಣಾ ಫಲಾನುಭವಿಗಳು, ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮತ್ತು ಅರಣ್ಯ ಹಕ್ಕುಗಳ ಕಾಯ್ದೆಯ ಫಲಾನುಭವಿಗಳು ಹಾಗೂ ಸಣ್ಣ ಮತ್ತು ಅತಿಸಣ್ಣ ಹಿಡುವಳಿದಾರರು ಉದ್ಯೋಗ ಚೀಟಿ ಹಾಗೂ ಕೆಲಸ ಪಡೆಯಲು ಅವಕಾಶವಿದೆ.

ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ ಸಂಪರ್ಕಿಸಬಹುದಾದ ಅಧಿಕಾರಿಗಳು: ಉಪಕಾರ್ಯದರ್ಶಿ (ಅಭಿವೃದ್ಧಿ), ಜಿಪಂ, ಮಂಡ್ಯ–94808 72007 ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು

| | |
|---|---|
| ಕೆಆರ್ ಪೇಟೆ– 9480872105, | ಮಂಡ್ಯ–94808 72100 |
| ಮದ್ದೂರು– 94808 72110, | ಮಳವಳ್ಳಿ– 94808 72115 |
| ನಾಗಮಂಗಲ–9480872120, | ಪಾಂಡವಪುರ–94808 72125 |
| ಶ್ರೀರಂಗಪಟ್ಟಣ–9480872130, | ಎಡಿಪಿಸಿ– 94820 30939, |
| ಡಿಎಂಐಎಸ್– 94808 50141 | |

## ವಿಧಾನಸಭೆ ವಿಶೇಷ ಅಧಿವೇಶನ ಕರೆಯಲು ಕುಮಾರಸ್ವಾಮಿ ಆಗ್ರಹ

ಬೆಂಗಳೂರು : ನಾಡಿನ ಕೋವಿಡ್ ಸ್ಥಿತಿಗತಿ, ಸರಕಾರದ ಮೇಲಿನ ಭ್ರಷ್ಟಾಚಾರ ಆರೋಪ, ಆಡಳಿತದಲ್ಲಿ ಅನ್ಯರ ಹಸ್ತಕ್ಷೇಪ ಮತ್ತು 'ಕನ್ನಡ, ಕನ್ನಡಿಗ, ಕರ್ನಾಟಕ'ದ ವಿಚಾರದಲ್ಲಿ ಆಗುತ್ತಿರುವ ಹಿನ್ನಡೆ ಕುರಿತು ಚರ್ಚಿಸಲು ವಿಧಾನಸಭೆಯ ವಿಶೇಷ ಅಧಿವೇಶನ ಕರೆಯುವಂತೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿಯವರು



ರಾಜ್ಯಪಾಲರು, ಮುಖ್ಯಮಂತ್ರಿ ಮತ್ತು ವಿಧಾನ ಸಭಾಧ್ಯಕ್ಷರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಕೋವಿಡ್ ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ. ಈ ಸೋಂಕಿನಿಂದ ಹಲವು ಜೀವಹಾನಿ ಹಾಗೂ ಜೀವನವು ದುಸ್ತರವಾಗಿದೆ. ಆದರೆ ಜೀವಹಾನಿ, ಜನಜೀವನಕ್ಕಾದ ತೊಂದರೆಗೆ ಸರಕಾರ ನೀಡಿರುವ ಪರಿಹಾರ ಸೂಕ್ತವಾದುದ್ದಲ್ಲ. ಕೋವಿಡ್ ನಿಂದ ಮೃತಪಟ್ಟವರ ಕುಟುಂಬಗಳಿಗೆ ನೀಡುವ ಪರಿಹಾರದಲ್ಲಿ ತಾರತಮ್ಯ, ಜಿಪುಣತೆ ತೋರಲಾಗಿದೆ. ಅದೇರೀತಿ ಲಾಕ್ ಡೌನ್ ಪರಿಹಾರವಾಗಿ ಸರಕಾರ ಘೋಷಿಸಿರುವ ಪ್ಯಾಕೇಜ್ ಅತ್ಯಂತ ಅಲ್ಪ ಪ್ರಮಾಣದ್ದು. ಈ ಪ್ಯಾಕೇಜ್ ಘೋಷಣೆ ಮಾಡುವ ಮುನ್ನ ಸರ್ವಪಕ್ಷಗಳ ಅಭಿಪ್ರಾಯ ಕೇಳಬೇಕಿತ್ತು ಎಂದು ಕುಮಾರಸ್ವಾಮಿ ಪತ್ರದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸದ್ಯ ಕೋವಿಡ್ 3ನೇ ಅಲೆಯ ಭೀತಿ ತಲೆದೋರಿದ್ದು, ಈ ಸಂದರ್ಭ ಹಿಂದಿನ ವೈಫಲ್ಯ, ಮುಂದೆ ಆಗಬೇಕಾಗಿರುವ ಕ್ರಮಗಳ ಬಗ್ಗೆ ಚರ್ಚಿಸುವ ಉದ್ದೇಶದಿಂದ ವಿಶೇಷ ಅಧಿವೇಶನ ಕರೆಯುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಿಸಿದ್ದಾರೆ.

**ಭ್ರಷ್ಟಾಚಾರ ಆರೋಪ**

ರಾಜ್ಯ ಸರಕಾರದ ಮೇಲೆ ಭ್ರಷ್ಟಾಚಾರದ ಗುರುತರ ಆರೋಪಗಳಿವೆ. ನೀರಾವರಿ ಇಲಾಖೆ ಯೋಜನೆಯ 20,000 ಕೋ.ರೂ. ಟೆಂಡರ್ ನಲ್ಲಿ ಶೇ.10 ಕಿಕ್ ಬ್ಯಾಕ್ ಪಡೆಯಲಾಗಿದೆ ಎಂದು ಆಡಳಿತ ಪಕ್ಷದ ಹಿರಿಯ ಶಾಸಕರೇ ಆರೋಪಿಸಿದ್ದಾರೆ. ಅಲ್ಲದೆ ಇದರಲ್ಲಿ ಮುಖ್ಯಮಂತ್ರಿಯ ಕುಟುಂಬದ ಕೈವಾಡ ಇದೆ ಎಂದು ಆರೋಪಿಸಲಾಗಿದೆ. ಇದಲ್ಲದೆ ಅಬಕಾರಿ ಸಚಿವರು ಪ್ರತೀ ಜಿಲ್ಲೆಯಿಂದ ಲಂಚದ ಹಣ ಅಪೇಕ್ಷಿಸುತ್ತಿರುವ ಆರೋಪವೂ ಕೇಳಿಬಂದಿದೆ. ಆದ್ದರಿಂದ ಈ ಎಲ್ಲ ಭ್ರಷ್ಟಾಚಾರ ಪ್ರಕರಣಗಳ ಬಗ್ಗೆಯೂ ಸದನದಲ್ಲಿ ಚರ್ಚೆ ಮಾಡಬೇಕಾದ ಅಗತ್ಯವಿದೆ ಎಂದು ಕುಮಾರಸ್ವಾಮಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಇವೆಲ್ಲದರ ಜೊತೆಗೆ ಇತ್ತೀಚಿನ ದಿನಗಳಲ್ಲಿ ಕನ್ನಡ, ಕರ್ನಾಟಕ, ಕನ್ನಡಿಗರಿಗೆ ಹಿನ್ನಡೆಗಳಾಗುತ್ತಿವೆ. ಈ ಬಗ್ಗೆಯೂ ಚರ್ಚೆಗಳಾಗಬೇಕಿದೆ ಎಂದು ಅವರು ಪತ್ರದಲ್ಲಿ ಅಭಿಪ್ರಾಯಿಸಿದ್ದಾರೆ.

## 'ವಿಶ್ವ ಗುರು' ಭಾರತ ಮೋದಿಯಿಂದಾಗಿ 'ವಿಶ್ವ ಬಿಕಾರಿ'ಯಾಗುತ್ತಿದೆ

ನವದೆಹಲಿ: ಭಾರತವನ್ನು ವಿಶ್ವಗುರು ಮಾಡುತ್ತೇನೆ ಎಂದಿದ್ದ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ವ್ಯಂಗ್ಯವಾಡಿದೆ.



ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿರುವ ಪಂಜಾಬ್ ಕಾಂಗ್ರೆಸ್ ಅಧ್ಯಕ್ಷ ಸುನೀಲ್ ಜಂಕರ್, ಯುಎಸ್‌ಡಿ 5 ಟ್ರಿಲಿಯನ್ ಆರ್ಥಿಯತೆಯನ್ನು ಸೃಷ್ಟಿಸಿ, ವಿಶ್ವಕ್ಕೆ ಭಾರತ ಗುರುವಾಗಲಿದೆ ಎಂದು ಮೋದಿ ಹೇಳಿದ್ದರು. ಆದರೆ ಈಗ ವಿಶ್ವದ ದೊಡ್ಡ ದೊಡ್ಡ ರಾಷ್ಟ್ರಗಳಿಂದ ಭಾರತ ಸಹಾಯ ಪಡೆಯುತ್ತಿದೆ. ಭಾರತವನ್ನು ಪ್ರಧಾನಿ ಮೋದಿ ವಿಶ್ವ ಬಿಕಾರಿಯನ್ನಾಗಿ ಮಾಡಿದ್ದಾರೆ ಎಂದು ಟೀಕಿಸಿದ್ದಾರೆ.

ಕೊರೊನಾ 2ನೇ ಅಲೆ ವೇಳೆ ಮೋದಿ ಅವರ ನಿರ್ವಹಣೆ ಕಳಪೆಯಾಗಿತ್ತು. ಹೇಗೆ ನಿರ್ವಹಣೆ ಮಾಡಬಾರದು ಎಂಬುವುದಕ್ಕೆ ಮೋದಿ ಆಡಳಿತ ಮಾದರಿಯಾಗಿದೆ. 5 ಟ್ರಿಲಿಯನ್ ಆರ್ಥಿಕತೆ ಮೂಲಕ ಭಾರತ ವಿಶ್ವಗುರು ಎನಿಸಿಕೊಳ್ಳುತ್ತೆ ಎಂದು ಬಡಾಯಿ ಕೊಚ್ಚಿಕೊಂಡಿದ್ದರು. ಆದರೆ ಈಗ ನಿತ್ಯ ಆಕ್ಸಿಜನ್ ಹೊತ್ತ ವಿಮಾನಗಳು ವಿದೇಶದಿಂದ ಬರುತ್ತಿವೆ. ಪ್ರಪಂಚದ ಎದುರು ಭಾರತ ಆಕ್ಸಿಜನ್‌ಗಾಗಿ ಕೈಚಾಚಿ ಕೂತಿದೆ. ಭಾರತವನ್ನು ಪ್ರಧಾನಿ ಮೋದಿ ವಿಶ್ವಬಿಕಾರಿಯನ್ನಾಗಿ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ಮೈಸೂರಿನಲ್ಲಿ ಡೆಲ್ಟಾ ಚಿಕಿತ್ಸೆಗೆ ಪ್ರತ್ಯೇಕ ವಾರ್ಡ್ ತೆರೆಯಲು ಚಿಂತನೆ

ಮೈಸೂರು: ಕೊರೊನಾ ರೂಪಾಂ ತರಿ ಡೆಲ್ಟಾ ವೈರಸ್‌ಗೆ ಚಿಕಿತ್ಸೆ ನೀಡಲು ಜಿಲ್ಲಾಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡ್ ತೆರೆಯುವ ಚಿಂತನೆ ನಡೆಸಲಾಗಿದೆ.

ಕೊರೊನಾ ಪ್ರಕರಣ ದಿನೇ ದಿನೇ ಇಳಿಮುಖವಾಗುತ್ತಿದ್ದು, ಲಾಕ್‌ಡೌನ್ ಹಂತ ಹಂತವಾಗಿ ಸಡಿಲಗೊಳ್ಳುತ್ತಿದೆ. ಇಂತಹ ಸಂದ ರ್ಭದಲ್ಲಿ ಕಾಣಿಸಿಕೊಂಡಿ ರುವ ರೂಪಾಂತರಿ 'ಡೆಲ್ಟಾ ವೈರಸ್ ಹಾಗೂ ಡೆಲ್ಟಾ ಪ್ಲಸ್' ಜಿಲ್ಲಾಡಳಿತಕ್ಕೆ ತಲೆ ನೋವಾಗಿ ಪರಿಣಮಿಸಿದೆ. ಈ ಹಿನ್ನೆಲೆ ಯಲ್ಲಿ ಡೆಲ್ಟಾ ಸೋಂಕಿತರಿಗೆಂದೆ ನಗರದ ಕೆ.ಆರ್.ರಸ್ತೆಯ ಮೇಟಗಳ್ಳಿಯಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡ್ ಮೀಸ ಲಿಡಲು ಜಿಲ್ಲಾಡಳಿತ ಚಿಂತನೆ ನಡೆಸಿದೆ.



ಕೊರೊನಾ ರೂಪಾಂತರಿ ಸ್ಪೈಕ್ ಪ್ರೋಟೀನ್‌ಗಳನ್ನು ಟಾರ್ಗೆಟ್ ಮಾಡುತ್ತದೆ. ಆದರೆ, ಲಸಿಕೆ ಇದರಿಂದ ತೀವ್ರ ಸ್ವರೂಪಕ್ಕೆ ಹೋಗುವುದನ್ನು ತಡೆಯುತ್ತದೆ. ಹಾಗಾಗಿ ಕೋವಿಶೀಲ್ಡ್ ಉಪಯೋಗವಿಲ್ಲ ಎನ್ನುವುದೂ ತಪ್ಪು. ಆದರೆ, ಈ ರೂಪಾಂತರಿ ವೈರಸ್‌ಗಳಿಗೆ ಎಂಆರ್‌ಎನ್‌ಎ ವ್ಯಾಕ್ಸಿನ್ ಸಹಾಯಕಾರಿಯಾಗಲಿದೆ.

–ಡಾ.ಸಿ.ಪಿ.ನಂಜರಾಜ್, ಡೀನ್, ಮೈಸೂರು ವೈದ್ಯಕೀಯ ಕಾಲೇಜು

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ಹಾಗೂ ಡಿಸಿ ಡಾ. ಬಗಾದಿ ಗೌತಮ್ ಅವರೊಂದಿಗೆ ಮಾತುಕತೆ ನಡೆಸಲಾಗಿದ್ದು, ಡೆಲ್ಟಾ ಸೋಂ ಕಿತರ ಚಿಕಿತ್ಸೆಗೆ ಜಿಲ್ಲಾಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡ್ ತೆರೆಯುವ ಬಗ್ಗೆ ಚರ್ಚೆ ನಡೆಸಲಾಗಿದೆ. ಸದ್ಯ ಪ್ರತಿದಿನ 10 ಸ್ಯಾಂಪಲ್ಸ್‌ಗಳನ್ನು ಬೆಂಗಳೂರಿನ ನಿಮ್ಹಾನ್ಸ್‌ಗೆ ಕಳುಹಿಸಲಾಗುತ್ತಿದೆ.

ಕೆಲವೊಂದು ಸ್ಯಾಪಲ್ ಗಳ ರಿಸೆಲ್ಟ್‌ಗೆ ಕಾಯುತ್ತಿದ್ದು, ಡೆಲ್ಟಾ ವೈರಸ್ ಕಾಣಿಸಿಕೊಂಡಿರುವ ಮೂವರ ಮೇಲೆ ನಿಗಾ ಇಡಲಾಗಿದೆ. ಇವರಿಗೆ ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲ. ಎಲ್ಲರೂ ಎ ಲಕ್ಷಣವುಳ್ಳವರಾಗಿದ್ದಾರೆಂದು ಡಿಎಚ್‌ಓ ಡಾ.ಕೆ.ಎಚ್.ಪ್ರಸಾದ್ ಹೇಳಿದ್ದಾರೆ.

ಇನ್ನೂ ಡೆಲ್ಟಾಪ್ಲಸ್ ಪ್ರಕರಣದ ವ್ಯಕ್ತಿ ಗುಣಮುಖರಾಗಿದ್ದಾರೆ. ಈ ವ್ಯಕ್ತಿಯ ಟ್ರಾವೆಲ್ ಹಿಸ್ಟರಿಯನ್ನೂ ಸಂಗ್ರಹಿಸಿದ್ದು, ಆತನಿಂದ ಪ್ರಥಮ ಹಾಗೂ ದ್ವಿತೀಯ ಸಂಪರ್ಕಿರನ್ನು ಐಸೋಲೇಷನ್‌ಗೆ ಒಳಪಡಿಸಲಾಗಿದೆ. ಆದ್ದರಿಂದ, ಆತಂಕಪಡುವ ಅಗತ್ಯವಿಲ್ಲ ಎಂದೂ ಅವರು ಮಾಹಿತಿ ನೀಡಿದ್ದಾರೆ.

ಮೂರ್ನಾಲ್ಕು ದಿನಗಳ ಹಿಂದೆಯಷ್ಟೇ ಡೆಲ್ಟಾಪ್ಲಸ್ ಒಂದು ಹಾಗೂ ಮೂರು ಡೆಲ್ಟಾ ಪ್ರಕರಣಗಳು ಕಂಡುಬಂದಿತ್ತು. ಇದು ಅಷ್ಟೇನೂ ಆಂತಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ಹಾಗೂ ಸಾಂಕ್ರಾಮಿಕ ರೋಗ ತಜ್ಞರು ಅಭಯ ನೀಡಿದರೂ ಸಾರ್ವಜನಿಕ ವಲಯದಲ್ಲಿ ಆತಂಕ ಉಂಟು ಮಾಡಿದೆ. ಮೈಸೂರಿನಲ್ಲಿ ಸದ್ಯ ಕಾಣಿಸಿಕೊಂಡಿರುವ ನಾಲ್ಕು ಪ್ರಕರಣ (3 ಡೆಲ್ಟಾ, 1 ಡೆಲ್ಟಾಪ್ಲಸ್)ದಲ್ಲಿ ಡೆಲ್ಟಾಪ್ಲಸ್ ಸೋಂಕಿತ ವ್ಯಕ್ತಿ ಸಂಪೂರ್ಣ ಗುಣಮುಖನಾಗಿದ್ದು, ಡೆಲ್ಟಾ ಸೋಂಕಿತರ ಮೂವರ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇಲ್ಲವೆಂದು ಜಿಲ್ಲಾ ಆರೋಗ್ಯ ಇಲಾಖೆ ಸ್ಪಷ್ಟಪಡಿಸಿದೆ.

## ಅಕ್ರಮ ಹಣ ವರ್ಗಾವಣೆ: ಮಾಜಿ ಸಚಿವ ಅನಿಲ್ ದೇಶ್‌ಮುಖ್ ಬಂಧನ ಸಾಧ್ಯತೆ



ಮುಂಬೈ : ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಮಹಾರಾಷ್ಟ್ರ ಮಾಜಿ ಸಚಿವ ಅನಿಲ್ ದೇಶಮುಖ್ ಅವರಿಗೆ ಜಾರಿ ನಿರ್ದೇಶನಾಲಯ ಈಗಾಗಲೇ ಸಮನ್ಸ್ ಜಾರಿ ಮಾಡಲಾಗಿದ್ದು, ಬಂಧಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿ ಮಹಾರಾಷ್ಟ್ರದ ಮಾಜಿ ಗೃಹ ಸಚಿವ ಅನಿಲ್ ದೇಶಮುಖ್ ಅವರ ಇಬ್ಬರು ಆಪ್ತರನ್ನ ಜಾರಿ ನಿರ್ದೇಶನಾಲಯ (ಇ.ಡಿ) ಬಂಧಿಸಿದೆ.

ಇಬ್ಬರನ್ನು ಮುಂಬೈನ ಬಲ್ಲಾರ್ಡ್ ಎಸ್ಟೇಟ್‌ನಲ್ಲಿರುವ ಕಚೇರಿಯಲ್ಲಿ ವಿಚಾರಣೆಗೆ ಒಳಪಡಿಸಲಾಗಿತ್ತು. ಇಬ್ಬರೂ ತನಿಖಾಧಿಕಾರಿಗಳ ಪ್ರಶ್ನೆಗಳಿಗೆ ಸರಿಯಾಗಿ ಉತ್ತರಿಸಿರಲಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.

ದೇಶಮುಖ್ ಅವರ ಆಪ್ತ ಕಾರ್ಯದರ್ಶಿ ಸಂಜೀವ್ ಪಲಾಂಡೆ ಮತ್ತು ಆಪ್ತ ಸಹಾಯಕ ಕುಂದನ್ ಶಿಂದೆ ಅವರನ್ನು ಬಂಧಿಸಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಬಳಿಕ ಇವರಿಬ್ಬರನ್ನು ಜಾರಿ ನಿರ್ದೇಶನಾಲಯದ ಕಚೇರಿಗೆ ವಿಚಾರಣೆಗಾಗಿ ಕರೆತರಲಾಗಿತ್ತು.

ಬಂಧಿತರನ್ನು ಪಿಎಂಎಲ್‌ಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಿ ವಶಕ್ಕೆ ಒಪ್ಪಿಸುವಂತೆ ಮನವಿ ಮಾಡಲಾಗುವುದು ಎಂದು ಜಾರಿ ನಿರ್ದೇಶನಾಲಯ ಅಧಿಕಾರಿಗಳು ಹೇಳಿದ್ದಾರೆ.

'ಅಕ್ರಮ ಹಣ ವರ್ಗಾವಣೆ ನಿಯಂತ್ರ ಕಾಯ್ದೆ ಅಡಿ ಅನಿಲ್ ದೇಶಮುಖ್ ಅವರ ನಾಗಪುರದ ನಿವಾಸ ಸೇರಿದಂತೆ ವಿವಿಧ ಕಡೆಗಳ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಶುಕ್ರವಾರ ದಾಳಿ ನಡೆಸಿ, ಶೋಧ ನಡೆಸಿದ್ದರು.

ಹಾಗೆಯೇ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅನಿಲ್ ದೇಶಮುಖ್ ಅವರನ್ನು ಬಂಧಿಸುವ ಸಾಧ್ಯತೆ ಇದೆ ಎನ್ನುವ ಮಾಹಿತಿ ಲಭ್ಯವಾಗಿದೆ.

# ಪೆಟ್ರೋಲ್‌ನ ನಿಜವಾದ ಬೆಲೆ 37ರೂ.: ಬೆಲೆ ಏರಿಕೆ ಖಂಡಿಸಿ ಜೆಡಿಎಸ್ ಪ್ರತಿಭಟನೆ

ಕೆ.ಆರ್.ಪೇಟೆ: ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪೆಟ್ರೋಲ್, ಡೀಸೆಲ್ ಬೆಲೆಯನ್ನು ಎರಡು ಪಟ್ಟು ತೆರಿಗೆ ವಿಧಿಸಿರುವ ಕಾರಣ 100ರೂ ಗಡಿ ದಾಟಿವೆ. ಇದರಿಂದಾಗಿ ಅಗತ್ಯ ವಸ್ತುಗಳ ಬೆಲೆಗಳು ಗಗನಕ್ಕೇರಿವೆ ಇದರಿಂದ ಜನಸಾಮಾನ್ಯರಿಗೆ ಬೆಲೆ ಏರಿಕೆಯ ಬಿಸಿ ತಟ್ಟಿದೆ. ಇದರಿಂದ ಆಹಾರ ವಸ್ತುಗಳನ್ನು ಕೊಳ್ಳಲೂ ತೊಂದರೆಯಾಗಿದೆ. ಹಾಗಾಗಿ ಕೂಡಲೇ ಬೆಲೆ ಇಳಿಕೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ತಾಲ್ಲೂಕು ಜೆಡಿಎಸ್ ಕಾರ್ಯಕರ್ತರು ಪಟ್ಟಣದ ಮಿನಿವಿಧಾನ ಸೌಧಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.




ಜನ ಸಾಮಾನ್ಯರಿಗೆ ಬೆಲೆ ಏರಿಕೆಯ ಹೊರೆಯನ್ನು ಕಡಿಮೆ ಮಾಡದೇ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕು ಜಾತ್ಯಾತೀಯ ಜನತಾದಳದ ಅಧ್ಯಕ್ಷ ಎ.ಎನ್.ಜಾನಕೀರಾಮು ಅವರು ಮಾತನಾಡಿ ಪ್ರಧಾನಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದರೆ ದೇಶವನ್ನು ಬದಲಾವಣೆ ಮಾಡುತ್ತಾರೆ, ಬಡತನವನ್ನು ತೊಲಗಿಸುತ್ತಾರೆ ಎಂಬ ಭಾವನೆಯಿಂದ ಇದ್ದ ಜನರಿಗೆ ಈಗ ಭ್ರಮನಿರಸವಾಗಿದೆ. ಕಳೆದ ಏಳು ವರ್ಷಗಳಿಂದಲೂ ಜನಸಾಮಾನ್ಯರಿಗೆ ಅನುಕೂಲವಾಗುವ ಜನಪರ ಯೋಜನೆಗಳನ್ನು ಜಾರಿಗೆ ತರದೇ ಕೇವಲ ಶ್ರೀಮಂತರ ಹಾಗೂ ಕಾರ್ಪೊರೇಟ್ ಗಳಿಗೆ ಅನುಕೂಲ ಮಾಡಿಕೊಡುವಂತಹ ಯೋಜನೆ ಜಾರಿಗೊಳಿಸುತ್ತಿದ್ದಾರೆ. ಮೋದಿಯವರಿಗೆ ಬಡಜನರ ಕಷ್ಟ ಹೇಗೆ ತಿಳಿಯಬೇಕು. ರಾಜ್ಯದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕೊರೋನಾದಂಥಹ ಸಂಕಷ್ಟದ ಸಮಯದಲ್ಲಿಯೂ ಜನಸಾಮಾನ್ಯರ ಜೀವದ ಜೊತೆಯಲ್ಲಿ ಆಟವಾಡುತ್ತಿದ್ದಾರೆ. ಪೆಟ್ರೋಲ್ ಬೆಲೆಯು ನೂರು ರೂಪಾಯಿಯ ಗಡಿ ದಾಟಿದೆ. ಡೀಸೆಲ್ ಬೆಲೆಯು ನೂರು ರೂಪಾಯಿಗಳ ಹತ್ತಿರಕ್ಕೆ ಬರುತ್ತಿದೆ. ಅಡುಗೆ ಎಣ್ಣೆಯ ಬೆಲೆಯು 180 ರೂ ದಾಟುತ್ತಿದೆ. ಆದ್ದರಿಂದ ಕೂಡಲೇ ಸಿಎಂ ಯಡಿಯೂರಪ್ಪ ಹಾಗೂ ಪ್ರಧಾನಿ ನರೇಂದ್ರಮೋದಿ ಅವರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

**ಕೋವಿಡ್‌ನಿಂದ ಮೃತರಾದ ಕುಟುಂಬಗಳಿಗೆ 5 ಲಕ್ಷರೂ ಪರಿಹಾರ ನೀಡಬೇಕು: ಹೆಚ್.ಟಿ.ಮಂಜು.**

ಕೋವಿಡ್ ಸಮಯದಲ್ಲಿಯೂ ಕೇಂದ್ರ ಸರ್ಕಾರಕ್ಕೆ ನಿರೀಕ್ಷೆಗಿಂತ ಹೆಚ್ಚಿನ ಜಿಎಸ್‌ಟಿ ವಸೂಲಿಯಾಗಿದೆ. ಹೀಗಿದ್ದರೂ ಕಬ್ಬಿಣ, ಸಿಮೆಂಟ್, ಸೇರಿದಂತೆ ಜನಸಾಮಾನ್ಯರು ಬಳಸುವ ಎಲ್ಲಾ ವಸ್ತುಗಳು ಏರಿಕೆಯಾಗಿವೆ. ಕೊರೋನಾ ಮೊದಲನೇ ಅಲೆ ಹಾಗೂ ಎರಡನೇ ಅಲೆಯಲ್ಲಿ ಅಪಾರ ಪ್ರಮಾಣದ ಸಾವು ನೋವುಗಳು ಸಂಭವಿಸಿದ್ದು, ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಕುಟುಂಬಗಳಲ್ಲಿನ ಜನರು ಕೋವಿಡ್ ನಿಂದಾಗಿ ಮರಣ ಹೊಂದಿದ್ದರೆ ಅವರುಗಳಿಗೆ ಐದು ಲಕ್ಷ ರೂಪಾಯಿಗಳ ಪರಿಹಾರ ಘೋಷಿಸಬೇಕು. ಆರುನೂರ ಐವತ್ತು ರೂಪಾಯಿ ಇದ್ದ ಗ್ಯಾಸ್ ಬೆಲೆಯನ್ನು 850 ರೂಪಾಯಿಗೆ ಏರಿಸಿ, ಕಾಳುಗಳ ಬೆಲೆಯನ್ನು ಶೇ75% ಏರಿಸಿರುವುದು ಬಡವರ ಪಾಲಿಗೆ ಬಿಸಿತುಪ್ಪವಾಗಿ ಪರಿಣಮಿಸಿದೆ. ಕೂಲಿ ಕಾರ್ಮಿಕರು, ದುಡಿದು ತಿನ್ನುವ ಕಾರ್ಮಿಕ ವರ್ಗಕ್ಕೆ ಇದರಿಂದ ಬಹಳ ತೊಂದರೆ ಉಂಟಾಗಿದೆ. ಕೂಡಲೇ ಪ್ರಧಾನಿ ಮಧ್ಯೆ ಪ್ರವೇಶಿಸಿ ಅಗತ್ಯವಸ್ತುಗಳ ಬೆಲೆ ಏರಿಕೆಯಾಗಿರುವುದನ್ನು ತಡೆಗಟ್ಟಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಮನವಿ ಮಾಡಿದರು.

**ಪೆಟ್ರೋಲ್‌ನ ನಿಜವಾದ ಬೆಲೆ 37 ರೂ: ಬಿ.ಎಲ್.ದೇವರಾಜು**


ಹೊರದೇಶಗಳಿಂದ ಭಾರತಕ್ಕೆ ಬರುವ ಪೆಟ್ರೋಲ್‌ನ ನಿಜವಾದ ಬೆಲೆ ಪ್ರತಿ ಲೀಟರ್ ಕೇವಲ 37 ರೂಪಾಯಿ ಇದ್ದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮನಸೋಇಚ್ಚೆ ತೆರಿಗೆ ಹಾಕಿರುವ ಕಾರಣ ಪೆಟ್ರೋಲ್, ಡೀಸೆಲ್ ಬೆಲೆ ನೂರರ ಗಡಿ ದಾಟಿದೆ. ಜನರಿಗೆ ಸಹಾಯ ಮಾಡಬೇಕು ಎಂಬ ಮನಸ್ಸಿದ್ದರೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಈ ರೀತಿ ಮಾಡುತ್ತಿರಲಿಲ್ಲ. ಪೆಟ್ರೋಲ್ ಬೆಲೆ ಏರಿಕೆಯಾದರೆ ತಾನಾಗಿಯೇ ಎಲ್ಲಾ ವಸ್ತುಗಳ ಬೆಲೆ ಏರಿಕೆಯಾಗುತ್ತವೆ. ಕಡಿಮೆ ಮಾಡಿದರೆ ಎಲ್ಲಾ ಅಗತ್ಯ ವಸ್ತುಗಳ ಬೆಲೆಗಳು ಕಡಿಮೆಯಾಗಲಿವೆ. ರೈತರು ಬಳಸುವ ರಾಸಾಯನಿಕ ಗೊಬ್ಬರ ಹಿಂದೆ 400ರು ಇತ್ತು ಈಗ 1500 ರೂಪಾಯಿಗಳಿಗೆ ಏರಿದೆ. ಇದು ರೈತ ವಿರೋಧಿ ನೀತಿಯಾಗಿದೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ಮುಖಂಡ ಬಸ್ ಕೃಷ್ಣೇಗೌಡ, ಟಿಎಪಿಸಿಎಂಎಸ್ ನಿರ್ದೇಶಕ ಕೊರಟಿಕೆರೆ ದಿನೇಶ್, ಜೆಡಿಎಸ್ ಮುಖಂಡರಾದ ಎ.ಆರ್.ರಘು ಮಾತನಾಡಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಧೋರಣೆಗಳನ್ನು ಖಂಡಿಸಿದರು.

ಪ್ರತಿಭಟನೆಯಲ್ಲಿ ಮೈಸೂರು ಲ್ಯಾಂಪ್ಸ್ ಮಾಜಿ ಅಧ್ಯಕ್ಷ ಬಿ.ಎಲ್.ದೇವರಾಜು, ಮನ್‌ಮುಲ್ ನಿರ್ದೇಶಕ ಹೆಚ್.ಟಿ. ಮಂಜು. ತಾಲೂಕು ಜೆಡಿಎಸ್ ಯುವ ಘಟಕದ ಅಧ್ಯಕ್ಷ ಕೆ.ಎಸ್. ಸಂತೋಷ್‌ಕುಮಾರ್, ಜಿಲ್ಲಾ ಜೆಡಿಎಸ್ ಎಸ್.ಟಿ.ವಿಭಾಗದ ಅಧ್ಯಕ್ಷ ಪೂವನಹಳ್ಳಿ ರೇವಣ್ಣ, ಮನ್‌ಮುಲ್ ಮಾಜಿ ಅಧ್ಯಕ್ಷ ಹಾಗೂ ಜೆಡಿಎಸ್ ಮುಖಂಡರಾದ ಎಂ.ಬಿ.ಹರೀಶ್, ಬಸ್ ಕೃಷ್ಣೇಗೌಡ, ಅಕ್ಕಿಹೆಬ್ಬಾಳು ರಘು, ಪೂವನಹಳ್ಳಿ ರೇವಣ್ಣ, ತಾಲ್ಲೂಕು ಪಂಚಾಯಿತಿ ಸದಸ್ಯರಾದ ರಾಜಾಹುಲಿ ಬಿ.ಎನ್. ದಿನೇಶ್, ಮಲ್ಲೇನಹಳ್ಳಿ ಮೋಹನ್, ಮುರುಕನಹಳ್ಳಿ ವಿಜಯಕುಮಾರ್, ಹೆಚ್.ಎಸ್.ರಾಜು, ಖಲೀಲ್ ಅಹಮದ್, ದೀಪಶ್ರೀಮಂಜೇಶ್, ಟಿಎಪಿಸಿಎಂಎಸ್ ನಿರ್ದೇಶಕರಾದ ಬಲದೇವ್, ಕೊರಟೀಕೆರೆ ದಿನೇಶ್, ಎಸ್.ಆರ್.ನವೀನ್ ಕುಮಾರ್, ಬೊಮ್ಮೇನಹಳ್ಳಿ ಮಂಜುನಾಥ್, ಜೆಡಿಎಸ್ ಮುಖಂಡರಾದ ಎ.ಆರ್.ರಘು, ಕೋಟೆ ಸುಬ್ಬಣ್ಣ, ರೇವಣ್ಣ, ಹೆಳವೇಗೌಡ, ಶೀಳನೆರೆ ಸಿದ್ದೇಶ್, ದಡದಹಳ್ಳಿ ಅತೀಕ್, ಸೇರಿದಂತೆ ನೂರಾರು ಜೆಡಿಎಸ್ ಕಾರ್ಯಕರ್ತರು ಹಾಜರಿದ್ದರು.

ಕ್ರಾಂತಿಯ ಕಿಡಿ
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ
ಭಾನುವಾರ
27 ಜೂನ್ 2021

## ಮುಂದಿನ ಚುನಾವಣೆಯಲ್ಲಿ ಪ್ರಾದೇಶಿಕ ಪಕ್ಷಕ್ಕೆ ಅಧಿಕಾರ



ಚನ್ನಪಟ್ಟಣ : ಮುಂಬರುವ ವಿಧಾನಸಭಾ ಚುನಾ ವಣೆಯಲ್ಲಿ ಪ್ರಾದೇಶಿಕ ಪಕ್ಷಕ್ಕೆ ಜನರು ಮಣೆ ಹಾಕು ವುದು ಸ್ಪಷ್ಟವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಆಡಳಿತ ಪಕ್ಷದಲ್ಲಿ ನಾಯಕತ್ವದ ಕುರಿತು ಸ್ವಪಕ್ಷೀಯರಲ್ಲಿಯೇ ಅಸಮಾಧಾನವಿದೆ. ಮತ್ತೊಂದೆಡೆ ಕಾಂಗ್ರೆಸ್‌ನಲ್ಲೂ ಕೂಡ ಸಿಎಂ ಅಭ್ಯರ್ಥಿ ಕುರಿತು ಪೈಪೋಟಿ ನಡೆದಿದೆರುವಾಗಲೇ ಜೆಡಿಎಸ್ ನಾಯಕ ಈ ಹೇಳಿಕೆ ನೀಡಿದ್ದಾರೆ.

ಚನ್ನಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಪಕ್ಷಗಳ ವಿರುದ್ಧ ಜನರು ಈಗಾಗಲೇ ರೋಸಿ ಹೋಗಿದ್ದಾರೆ, ಇದೇ ಕಾರಣ ರಾಜ್ಯದಲ್ಲಿ ಮಾತ್ರವಲ್ಲದೇ ದೇಶದಲ್ಲಿಯೂ ಕೂಡ ಜನರು ಪ್ರಾದೇಶಿಕ ಪಕ್ಷದ ಕಡೆಗೆ ಒಲವು ತೋರುತ್ತಿದ್ದಾರೆ ಎಂದು ತಿಳಿಸಿದರು.

ರಾಜ್ಯದ ಜನರು ಕಾಂಗ್ರೆಸ್– ಬಿಜೆಪಿ ಆಡಳಿತ ಕಂಡು ಈಗಾಗಲೇ ಆಕ್ರೋಶಗೊಂಡಿದ್ದಾರೆ. ಕಳೆದ ಪಂಚ ರಾಜ್ಯಗಳ ಚುನಾವಣೆಯಲ್ಲೂ ಇದು ಸ್ಪಷ್ಟವಾಗಿದೆ. ಈ ವಿದ್ಯಮಾನ ಗಮನಿಸಿದರೆ, ಮುಂಬರುವ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

ಬಿಜೆಪಿ ಮತ್ತು ಕಾಂಗ್ರೆಸ್ ಪ್ರತಿಯೊಂದು ವಿಷಯಕ್ಕೂ ಹೈಕಮಾಂಡ್ ನತ್ತ ಮುಖ ಮಾಡುತ್ತವೆ. ರಾಜ್ಯದ ಆಡಳಿತ ನಡೆಸುವುದು ಹೈಕಮಾಂಡ್ ಅಲ್ಲ. ಈ ಕಾರಣದಿಂದಾಗಿ ಪ್ರಾದೇಶಿಕ ಪಕ್ಷಗಳೇ ಆಡಳಿತ ನಡೆಸಲಿ ಎಂಬ ನಿರ್ಧಾರವನ್ನು ಮತದಾರರು ಮಾಡುತ್ತಾರೆ. ಈ ನಿಟ್ಟಿನಲ್ಲಿ ನಾವು ಪ್ರಯತ್ನ ಮಾಡುತ್ತೇವೆ ಎಂದರು.

# ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ಕಾಂಗ್ರೆಸ್ ವಿಫಲ

### ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ ಕಿಡಿ

ಬೆಂಗಳೂರು/ಬಳ್ಳಾರಿ : ದೇಶದಲ್ಲಿ 60 ವರ್ಷಕ್ಕೂ ಹೆಚ್ಚು ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷವೂ ಎಲ್ಲ ಜ್ವಲಂತ ಸಮಸ್ಯೆಗಳನ್ನು ಜೀವಂತವಾಗಿ ಇಡಲು ಪ್ರಯತ್ನ ಮಾಡಿದೆಯೇ ವಿನಾ ಅವುಗಳಿಗೆ ಪರಿಹಾರ ಕಂಡುಕೊಳ್ಳಲಿಲ್ಲ ಎಂದು ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಟೀಕಿಸಿದರು.

ಬಳ್ಳಾರಿ ಬಿಜೆಪಿ ಘಟಕ ಹಮ್ಮಿಕೊಂಡಿದ್ದ ಈ–ಪ್ರಶಿಕ್ಷಣ ವರ್ಗ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರಮೋದಿ ಸರ್ಕಾರದ 7 ವರ್ಷಗಳ ಸಾಧನೆ ವಿಷಯದ ಬಗ್ಗೆ ವರ್ಚುವಲ್ ಮೂಲಕ ಮಾತನಾಡಿದ ಅವರು, ಕಾಂಗ್ರೆಸ್ ತನ್ನ ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಸಮಸ್ಯೆಗಳನ್ನು ನಿರಂತರವಾಗಿ ಬದುಕಿರುವಂತೆ ನೋಡಿಕೊಳ್ಳುತ್ತಿತ್ತು. ಆದರೆ, ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರ ಅಂಥ ಸಮಸ್ಯೆಗಳಿಗೆ ಚರಮಗೀತೆ ಹಾಡುತ್ತಾ ಬರುತ್ತಿದೆ ಎಂದರು.

ಕಾಶ್ಮೀರ, ರಾಮಮಂದಿರ, ವಲಸಿಗರ ದುಃಸ್ಥಿತಿ, ಉದ್ಯೋಗ, ಕೈಗಾರಿಕೆ, ಆರ್ಥಿಕತೆ, ಮೂಲಸೌಕರ್ಯ, ತೆರಿಗೆ, ಕಪ್ಪುಹಣ ಇತ್ಯಾದಿ ಅಂಶಗಳ ಬಗ್ಗೆ ಕಾಂಗ್ರೆಸ್ ಅದೆಷ್ಟು ಉಪೇಕ್ಷೆ ಮಾಡಿತ್ತು ಎಂಬುದನ್ನು ಬಿಡಿಸಿ ಹೇಳಬೇಕಿಲ್ಲ. ಇತಿಹಾಸವೇ ಎಲ್ಲ ಸತ್ಯಗಳನ್ನು ಬಿಚ್ಚಿಡುತ್ತಿದೆ. ಆದರೆ, ಬಿಜೆಪಿ ಸರ್ಕಾರ ಈ ಎಲ್ಲ ಸಮಸ್ಯೆಗಳಿಂದ ದೇಶವನ್ನು ಹೊರತಂದಿದೆ ಎಂದು ಅವರು ಹೇಳಿದರು.

ಒಂದು ಭಾರತ– ಎರಡು ರಾಷ್ಟ್ರ ಎನ್ನುವುದು ಕಾಂಗ್ರೆಸ್ ನೀತಿ. ಒಂದೇ ಭಾರತ– ಒಂದೇ ದೇಶ ಎನ್ನುವುದು ಬಿಜೆಪಿಯ ನೀತಿ. ಈ ಕಾರಣಕ್ಕಾಗಿಯೇ ಜಮ್ಮು ಮತ್ತು ಕಾಶ್ಮೀರಕ್ಕಿದ್ದ 370ನೇ ವಿಧಿಯನ್ನು ತೆಗೆಯಲಾಯಿತು. ಈಗ ಕಾಶ್ಮೀರವೂ ಭಾರತದ ಅಂತರ್ಭಾಗ. ಕಾಂಗ್ರೆಸ್‌ಗೆ ಇಂಥ ಇಚ್ಛಾಶಕ್ತಿ ಇರಲಿಲ್ಲ ಎಂದು ಅವರು ಕಿಡಿಕಾರಿದರು. ಈಶಾನ್ಯ ಭಾರತದಲ್ಲೂ ಸಮಸ್ಯೆಗಳ ಸರಮಾಲೆಯೇ ಇತ್ತು. ಬಾಂಗ್ಲಾ ಗಡಿಯಲ್ಲಿ ಒಳನುಸುಳುವಿಕೆ ಮಿತಿ ಮೀರಿತ್ತು.

ಈಗ ಎಲ್ಲವೂ ನಿಂತಿದೆ. ರಾಷ್ಟ್ರದ ಹಿತಾಸಕ್ತಿಗೆ ಮಾರಕವಾಗುವ ಅಂಶಗಳನ್ನು ಇಟ್ಟುಕೊಂಡೇ ಕಾಂಗ್ರೆಸ್ ರಾಜಕಾರಣ ಮಾಡುತ್ತಾ ಬಂದಿದೆ. ಇಂಥ ರಾಜಕೀಯ ಪ್ರವೃತ್ತಿಗೆ ಮೋದಿ ಅವರು ಇತಿಶ್ರೀ ಹಾಡುತ್ತಿದ್ದಾರೆ. ಇಷ್ಟು ಕಾಶ್ಮೀರ ಒಂದು ವಿಷಯವನ್ನಿಟ್ಟುಕೊಂಡು ಭಾರತದ ಮೇಲೆ ವಾಗ್ದಾಳಿ ನಡೆಸಲಾಗುತ್ತಿತ್ತು. ಈಗ ಜಗತ್ತಿಗೆ ಸತ್ಯದ ಅರಿವಾಗಿದೆ. ಆ ಹೆಗ್ಗಳಿಕೆ ಮೋದಿ ಅವರಿಗೆ ಸಲ್ಲಬೇಕು ಎಂದು ಡಿಸಿಎಂ ಹೇಳಿದರು.



ಕೋವಿಡ್ ನಿಂದಲೇ ಸ್ವಾವಲಂಬನೆಯತ್ತ:ಕೋವಿಡ್ ಸಂಕಷ್ಟ ಭಾರತಕ್ಕೆ ಬಂದಾಗ ಅದನ್ನೇ ಅವಕಾಶ ಮಾಡಿಕೊಂಡ ಮೋದಿ ಅವರು ಆತ್ಮನಿರ್ಭರ ಭಾರತ ಪರಿಕಲ್ಪನೆ ಅಡಿ ಕೈಗಾರಿಕೆ, ಉತ್ಪಾದನೆ, ಉದ್ಯೋಗ ಸೃಷ್ಠಿಗೆ ಉತ್ತೇಜನ ನೀಡಿದರು. ಕೇವಲ ಒಂದು ಪಿಪಿಇ ಕಿಟ್, ಮಾತ್ರೆ, ಔಷಧಿ, ಸ್ಯಾನಿಟೈಸರ್ ವಿಷಯದಲ್ಲಿ ಪರ ದೇಶಗಳ ಮೇಲೆ ಅವಲಂಭಿತವಾಗುತ್ತಿದ್ದ ಭಾರತವು ಕೇವಲ ಒಂದೂವರೆ ವರ್ಷದಲ್ಲೇ ಸಂಪೂರ್ಣ ಸ್ವಾವಲಂಭನೆ ಸಾಧಿಸಿತು. ಲಸಿಕೆ ತಯಾರಿಕೆಯಲ್ಲಿ ಜಗತ್ತಿನ ಅಗ್ರಮಾನ್ಯ ದೇಶವಾಗಿ ಹೊರಹೊಮ್ಮಿತು. ಇದು ಭಾರತದ ಸಾಧನೆ ಎಂದು ಡಿಸಿಎಂ ಒತ್ತಿ ಹೇಳಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಜಿಲ್ಲೆಯ ಬಿಜೆಪಿ ಅಧ್ಯಕ್ಷ ಚನ್ನಬಸವ ಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ.ರಮೇಶ್, ಜಿಲ್ಲಾ ಪ್ರಭಾರಿ ಸಚ್ಚಿದಾನಂದ ಇತರರು ಭಾಗಿಯಾಗಿದ್ದರು.

## ಪೆಟ್ರೋಲ್, ಡೀಸೆಲ್ ಬೆಲೆಗಳಲ್ಲಿ ಮತ್ತೆ ಏರಿಕೆ; ವಾಹನ ಸವಾರರಿಂದ ಹಿಡಿಶಾಪ



ನವದೆಹಲಿ: ದೇಶದಾದ್ಯಂತ ಪೆಟ್ರೋಲ್, ಡೀಸೆಲ್ ಬೆಲೆಗಳಲ್ಲಿ ಮತ್ತೆ ಏರಿಕೆಯಾಗಿದ್ದು, ಪೆಟ್ರೋಲ್ ದರ 31 ರಿಂದ 35 ಪೈಸೆ ಮತ್ತು ಡೀಸೆಲ್ ದರ 35 ಪೈಸೆ ಏರಿಕೆಯಾಗಿದೆ.

ಸರ್ಕಾರಿ ಸ್ವಾಮ್ಯದ ತೈಲ ಸಂಸ್ಕರಣಾ ಕಂಪನಿಗಳು (ಒಎಂಸಿ) ಶನಿವಾರ ದೇಶಾದ್ಯಂತ ಇಂಧನ ದರವನ್ನು ಮತ್ತೊಮ್ಮೆ ಹೆಚ್ಚಿಸಿದ್ದು, ಈ ಮೂಲಕ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಹೊಸ ದಾಖಲೆಯ ಗರಿಷ್ಠ ಮಟ್ಟಕ್ಕೆ ತಲುಪಿದೆ.

ಇಂಡಿಯನ್ ಆಯಿಲ್ ಕಾರ್ಪೊರೇಷನ್ ಮೂಲಗಳ ಪ್ರಕಾರ ಪ್ರತೀ ಲೀಟರ್ ಪೆಟ್ರೋಲ್ ದರದಲ್ಲಿ 31 ರಿಂದ 35 ಪೈಸೆ ಮತ್ತು ಡೀಸೆಲ್ ದರ 35 ಪೈಸೆ ಏರಿಕೆಯಾಗಿದೆ.

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಪ್ರತೀ ಲೀಟರ್ ಪೆಟ್ರೋಲ್ ದರ 101.45ಕ್ಕೆ ಏರಿಕೆಯಾಗಿದ್ದು, ಪ್ರತೀ ಲೀಟರ್ ಡೀಸೆಲ್ ದರ 94.04 ರೂ ಗೆ ಏರಿಕೆಯಾಗಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಪ್ರತೀ ಲೀಟರ್ ಪೆಟ್ರೋಲ್ ದರ 95.9ಕ್ಕೆ ಏರಿಕೆಯಾಗಿದ್ದು, ಪ್ರತೀ ಲೀಟರ್ ಡೀಸೆಲ್ ದರ 89.3 ರೂ ಗೆ ಏರಿಕೆಯಾಗಿದೆ.


ವಾಣಿಜ್ಯ ರಾಜಧಾನಿ ಮುಂಬೈನಲ್ಲಿ ಪ್ರತೀ ಲೀಟರ್ ಪೆಟ್ರೋಲ್ ದರ 104.28ಕ್ಕೆ ಏರಿಕೆಯಾಗಿದ್ದು, ಪ್ರತೀ ಲೀಟರ್ ಡೀಸೆಲ್ ದರ 96.22 ರೂ ಗೆ ಏರಿಕೆಯಾಗಿದೆ. ಕೋಲ್ಕತಾದಲ್ಲಿ ಪ್ರತೀ ಲೀಟರ್ ಪೆಟ್ರೋಲ್ ದರ 98.03 ಕ್ಕೆ ಏರಿಕೆಯಾಗಿದ್ದು, ಪ್ರತೀ ಲೀಟರ್ ಡೀಸೆಲ್ ದರ 91.55 ರೂ ಗೆ ಏರಿಕೆ ಯಾಗಿದೆ. ಚೆನ್ನೈನಲ್ಲಿ ಪ್ರತೀ ಲೀಟರ್ ಪೆಟ್ರೋಲ್ ದರ 99.24 ಕ್ಕೆ ಏರಿಕೆಯಾ ಗಿದ್ದು, ಪ್ರತೀ ಲೀಟರ್ ಡೀಸೆಲ್ ದರ 93.28 ರೂ ಗೆ ಏರಿಕೆಯಾಗಿದೆ.

ಸದ್ಯ ಪೆಟ್ರೋಲ್ ಬೆಲೆ 37 ರೂ. ಇದ್ದು, ಆ ತೆರಿಗೆ, ಈ ತೆರಿಗೆ ವಿಧಿಸಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ದರ ಸಮರ ದಿಂದ ಆಳುವ ಸರ್ಕಾರಗಳು ಉಳ್ಳವರಿಗೆ ಮಣೆ ಹಾಕಿ ಮನಸೋ ಇಚ್ಛೆ ಹೆಚ್ಚಿಸುತ್ತಿರುವುದಕ್ಕೆ ಬಡ ಜನತೆ ಹಿಡಿಶಾಪ ಹಾಕುತ್ತಿದ್ದಾರೆ.

## ಕಿಮ್ಸ್ ಆಸ್ಪತ್ರೆಯಲ್ಲಿ '120 ಬ್ಲ್ಯಾಕ್ ಫಂಗಸ್' ರೋಗಿಗಳಿಗೆ ಶಸ್ತ್ರ ಚಿಕಿತ್ಸೆ : ಶಾಶ್ವತವಾಗಿ ಕಣ್ಣು ಕಳೆದುಕೊಂಡ 10 ಜನರು

ಹುಬ್ಬಳ್ಳಿ : ಕೊರೋನಾ ನಂತ್ರ ಉಂಟಾಗುತ್ತಿರುವಂತ ಬ್ಲ್ಯಾಕ್ ಫಂಗಸ್ ರೋಗವು, ಎಲ್ಲರನ್ನು ಬೆಚ್ಚಿ ಬೀಳಿಸುತ್ತಿದೆ. ಕೊರೋನಾ ಗೆದ್ದು ಬಂದಂತ ಅನೇಕರಲ್ಲಿ ಬ್ಲ್ಯಾಕ್ ಫಂಗಸ್ ಸೋಂಕು ತಗುಲಿ, ಭಯವನ್ನು ಹುಟ್ಟಿಸುತ್ತಿದೆ. ಹೀಗೆ ಬ್ಲ್ಯಾಕ್ ಫಂಗಸ್ ರೋಗ ತಗುಲಿದಂತ 120 ಜನರಿಗೆ ಕಿಮ್ಸ್ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸೆಗೆ ಒಳಪಡಿಸಲಾಗಿದೆ. ಆದ್ರೇ 10 ರೋಗಿಗಳು ಮಾತ್ರ ಬ್ಲ್ಯಾಕ್ ಫಂಗಸ್ ನಿಂದಾಗಿ ಶಾಶ್ವತವಾಗಿ ಕಣ್ಣು ಕಳೆದುಕೊಂಡಿದ್ದಾಗಿ ತಿಳಿದು ಬಂದಿದೆ.

ಈ ಕುರಿತಂತೆ ಹುಬ್ಬಳ್ಳಿಯ ಕಿಮ್ಸ್ ನಿರ್ದೇಶಕ ಡಾ.ರಾಮಲಿಂಗಪ್ಪ ಅಂಟರತಾನಿ ಅವರು ಮಾಹಿತಿ ನೀಡಿದ್ದು, ಕಿಮ್ಸ್ ಆಸ್ಪತ್ರೆಯಲ್ಲಿ 150 ಬ್ಲ್ಯಾಕ್ ಫಂಗಸ್ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಇಂತಹ ರೋಗಿಗಳಲ್ಲಿ 120ಕ್ಕೂ ಹೆಚ್ಚು ಜನರಿಗೆ ಇಎನ್ ಟಿ ವಿಭಾಗದಿಂದ ಶಸ್ತ್ರ ಚಿಕಿತ್ಸೆ ಮಾಡಲಾಗಿದೆ. ಆದ್ರೇ ಇವರಲ್ಲಿ 10 ಜನರು ಶಾಶ್ವತವಾಗಿ ಕಣ್ಣು ಕಳೆದುಕೊಂಡಿರೋದಾಗಿ ತಿಳಿಸಿದ್ದಾರೆ.



ಕಿಮ್ಸ್ ನಲ್ಲಿ ಚಿಕಿತ್ಸೆ ಪಡೆಯುತ್ತಿರುವಂತ ಬ್ಲ್ಯಾಕ್ ಫಂಗಸ್ ಸೋಂಕಿತರು ಕೇವಲ ಒಂದೇ ರೀತಿ ಸಮಸ್ಯೆಯಿಂದ ಬಳಲುತ್ತಿಲ್ಲ. ಬದಲಾಗಿ ಕೆಲವರು ಕಣ್ಣು, ಕಿವಿ, ಮೆದುಳು ರೋಗದಿಂದಲೂ ಬಳಲುತ್ತಿದ್ದಾರೆ. ಮತ್ತೆ ಕೆಲವರು ಬಾಯಿ ದವಡೆ ಸಮಸ್ಯೆಯಿಂದಲೂ ಬಳಲುತ್ತಿದ್ದಾರೆ. ಇವರಿಗೆಲ್ಲಾ ಚಿಕಿತ್ಸೆ ನೀಡೋದೆ ವೈದ್ಯರಿಗೆ ಸವಾಲಾಗಿ ಪರಿಣಮಿಸಿದೆ ಎಂದಿದ್ದಾರೆ.

## ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಸುರಂಗ ಮಾರ್ಗದಲ್ಲಿ ಹಳಿ ತಪ್ಪಿದ ರಾಜಧಾನಿ ಎಕ್ಸ್‌ಪ್ರೆಸ್ ರೈಲು: ಪ್ರಯಾಣಿಕರು ಸುರಕ್ಷಿತ

ಮುಂಬೈ: ಹಸ್ರತ್ ನಿಜಾಮುದ್ದೀನ್ ಕಡೆಯಿಂದ ಗೋವಾ ಕಡೆಗೆ ಬರುತ್ತಿದ್ದ ರಾಜಧಾನಿ ಎಕ್ಸ್ ಪ್ರೆಸ್ ರೈಲು ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಸುರಂಗದೊಳಗೆ ಶನಿವಾರ ಬೆಳಗ್ಗೆ ಹಳಿ ತಪ್ಪಿದ ಘಟನೆ ನಡೆದಿದ್ದು ಅದೃಷ್ಟವಶಾತ್ ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ ಎಂದು ತಿಳಿದುಬಂದಿದೆ.




ರೈಲು ಸಂಖ್ಯೆ 02414 ಗೋವಾದ ಮಡಂಗಾವ್ ಗೆ ಹಸ್ರತ್ ನಿಜಾಮುದ್ದೀನ್ ಕಡೆಯಿಂದ ಬರುತ್ತಿತ್ತು. ಇಂದು ನಸುಕಿನ ಜಾವ 4.15ರ ಸುಮಾರಿಗೆ ಮುಂಬೈಯಿಂದ 325 ಕಿಲೋ ಮೀಟರ್ ದೂರದಲ್ಲಿ ಕರ್ಬುಡೆ ಸುರಂಗದ ಒಳಗೆ ರೈಲಿನ ಹಳಿ ತಪ್ಪಿತು ಎಂದು ಕೊಂಕಣ ರೈಲ್ವೆಯ ವಕ್ತಾರರು ತಿಳಿಸಿದ್ದಾರೆ.

ದೊಡ್ಡ ಬಂಡೆ ಕಲ್ಲೊಂದು ಹಳಿಯ ಮೇಲೆ ಬಿದ್ದಿದ್ದರಿಂದ ರೈಲು ಹಳಿ ತಪ್ಪಿತು. ರಾಜಧಾನಿ ಸೂಪರ್ ಫಾಸ್ಟ್ ರೈಲು ಚಲಿಸುತ್ತಿರುವಾಗ ಮುಂದಿನ ಚಕ್ರ ಕರ್ಬುಡೆ ಸುರಂಗ ಮಾರ್ಗದಲ್ಲಿ ಹಳಿ ತಪ್ಪಿದೆ. ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಕರ್ಬುಡೆ ಸುರಂಗ ಮಾರ್ಗದ ಉಕ್ಷಿ ಮತ್ತು ಬೊಕೆ ನಿಲ್ದಾಣಗಳ ಮಧ್ಯೆ ದುರಂತ ಸಂಭವಿಸಿದೆ ಎಂದು ಕೊಂಕಣ ರೈಲ್ವೆ ತಿಳಿಸಿದೆ.

ರೈಲ್ವೆ ನಿರ್ವಹಣಾ ವಾಹನ (ಆರ್‌ಎಂವಿ) ಸ್ಥಳಕ್ಕೆ ತಲುಪಿದ್ದು, ಮರು–ರೇಲಿಂಗ್ ಉಪಕರಣಗಳನ್ನು ಹೊಂದಿರುವ ಅಪಘಾತ ಪರಿಹಾರ ವೈದ್ಯಕೀಯ ವ್ಯಾನ್ (ಎಆರ್‌ಎಂವಿ) ಮರುಸ್ಥಾಪನೆ ಕಾರ್ಯಕ್ಕಾಗಿ ರತ್ನಗಿರಿಯಿಂದ ಸ್ಥಳಕ್ಕೆ ಆಗಮಿಸಿತು. ಕೊಂಕಣ ರೈಲ್ವೆ ಅಧಿಕಾರಿಗಳೂ ಸಹ ಮಾರ್ಗವನ್ನು ತೆರವುಗೊಳಿಸಲು ಸ್ಥಳಕ್ಕೆ ಧಾವಿಸಿದರು ಎಂದು ಅವರು ಹೇಳಿದ್ದಾರೆ. ಕೊಂಕಣ ರೈಲ್ವೆ ಮುಂಬೈ ಬಳಿಯ ರೋಹಾ ಮತ್ತು ಮಂಗಳೂರು ಬಳಿಯ ತೋಕೂರ್ ನಡುವೆ 756 ಕಿ.ಮೀ ಉದ್ದದ ಮಾರ್ಗವನ್ನು ನಿರ್ವಹಿಸುತ್ತದೆ. ಮಹಾರಾಷ್ಟ್ರ, ಗೋವಾ ಮತ್ತು ಕರ್ನಾಟಕ ಮೂರು ರಾಜ್ಯಗಳಲ್ಲಿ ಹರಡಿರುವ ಈ ಮಾರ್ಗವು ಅನೇಕ ನದಿಗಳು, ಕಮರಿಗಳು ಮತ್ತು ಪರ್ವತಗಳನ್ನು ಹೊಂದಿರುವ ಸವಾಲಿನ ಭೂಪ್ರದೇಶಗಳಲ್ಲಿ ಒಂದಾಗಿದೆ.

## ಮೈಸೂರು–ಚಾಮರಾಜನಗರ ರೈಲು ಪುನರಾರಂಭ

ಮೈಸೂರು: ಕಳೆದ ಕೆಲವು ದಿನಗಳಿಂದ ತಾತ್ಕಾಲಿಕವಾಗಿ ಸ್ಥಗಿತವಾಗಿದ್ದ ಮೈಸೂರು–ಚಾಮರಾಜನಗರ ರೈಲು ಸೇವೆ ಪುನರಾರಂಭವಾಗಿದ್ದು, ಮೊದಲ ದಿನವಾದ ನಿನ್ನೆ ಮಧ್ಯಾಹ್ನ 12.30ಕ್ಕೆ ಮೈಸೂರಿನಿಂದ ಹೊರಟ ರೈಲಿನಲ್ಲಿ 45 ಮಂದಿ ಪ್ರಯಾಣಿಸಿದ್ದಾರೆ.

ಇಂದಿನಿಂದ ಪ್ರತಿದಿನ ಬೆಳಿಗ್ಗೆ 7.20ಕ್ಕೆ ಹಾಗೂ ಮಧ್ಯಾಹ್ನ 12.30ಕ್ಕೆ ರೈಲುಗಳು ಮೈಸೂರಿನಿಂದ ಚಾಮರಾಜನಗರಕ್ಕೆ ಸಂಚರಿಸಲಿವೆ. ಬೆಳಿಗ್ಗೆ 7.20ರ ರೈಲು ಅಶೋಕಪುರಂ ನಿಲ್ದಾಣಗಳಲ್ಲಿಯೂ ನಿಲ್ಲಲಿದ್ದು, ಮಧ್ಯಾಹ್ನ 12.30ರ ರೈಲು ಚಾಮರಾಜಪುರಂ ಹಾಗೂ ಅಶೋಕಪುರಂನಲ್ಲಿ ನಿಲ್ಲಲಿದೆ. ಬೆಳಗಿನ ರೈಲಿನಲ್ಲಿ ಸಂಚರಿಸಲು ಮುಂಗಡ ಬುಕ್ಕಿಂಗ್ ಕಡ್ಡಾಯ. ಮಧ್ಯಾಹ್ನದ ರೈಲಿನಲ್ಲಿ ಪ್ರಯಾಣಿಸುವವರು ಮುಂಗಡ ಬುಕ್ಕಿಂಗ್ ಮಾಡಲೇಬೇಕಾದ ಅವಶ್ಯಕತೆ ಇಲ್ಲ ಎಂದು ತಿಳಿಸಲಾಗಿದೆ



## ನಾನಾ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ

ಮೈಸೂರು : ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷದವರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಕೂಡಲೇ ತಡೆಗಟ್ಟಬೇಕು, ಕೋವಿಡ್ ಸಂದರ್ಭದಲ್ಲಿ ರಾಜ್ಯ ಸರ್ಕಾರ ಏರಿಸಿರುವ ವಿದ್ಯುತ್ ದರವನ್ನು ಹಿಂಪಡೆಯಬೇಕು, ರೈತ ವಿರೋಧಿ, ಕಾರ್ಮಿಕ ವಿರೋಧಿ ಕಾನೂನುಗಳನ್ನು ರದ್ದುಪಡಿಸಬೇಕು, ಗ್ರಾಮೀಣ ಪ್ರದೇಶದಲ್ಲಿ ಜಾರಿಯಿರುವ ಉದ್ಯೋಗ ಖಾತ್ರಿ ಯೋಜನೆಯ ದಿನಗಳನ್ನು 200 ದಿನಗಳಿಗೆ ಹೆಚ್ಚಿಸಬೇಕು ಮತ್ತು ನಗರ ಪ್ರದೇಶಗಳಿಗೂ ವಿಸ್ತರಿಸಬೇಕು, ಕೋವಿಡ್ ಮುಂಚೂಣಿ ಕಾರ್ಯಕರ್ತರಿಗೆ ಸೂಕ್ತ ರಕ್ಷಣೆ ನೀಡಬೇಕು ಮತ್ತು ಮೃತಪಟ್ಟ ಮುಂಚೂಣಿ ಕಾರ್ಯಕರ್ತರಿಗೆ 30 ಲಕ್ಷ ರೂ. ಪರಿಹಾರ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿದರು. ಸಿಪಿಐ ಕಾರ್ಯದರ್ಶಿ ಎಚ್.ಆರ್. ಶೇಷಾದ್ರಿ, ಸಹ ಕಾರ್ಯದರ್ಶಿ ಎಚ್.ಬಿ. ರಾಮ ಕೃಷ್ಣ, ಎಐಟಿಯುಸಿ ಎನ್.ಕೆ. ದೇವದಾಸ್, ಕಾರ್ಯ ದರ್ಶಿ ಕೆ.ಜಿ.ಸೋಮ ರಾಜೇ ಅರಸ್ ಇತರರು ಉಪಸ್ಥಿತರಿದ್ದರು.




## ಮಜ್ಜಿಗೆಪುರದಲ್ಲಿ ಕೊರೊನಾ ಲಸಿಕೆ ಅಭಿಯಾನ ಯಶಸ್ವಿ

ಶ್ರೀರಂಗಪಟ್ಟಣ:ಕೆ.ಆರ್.ಸಾಗರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಗೆ ಸೇರಿದ ಹುಲಿಕೆರೆ ಪಂಚಾಯ್ತಿಯ ಮಜ್ಜಿಗೆಪುರ ಗ್ರಾಮದಲ್ಲಿ ಕೊರೋನಾ ಲಸಿಕೆ ನೀಡುವ ಅಭಿಯಾನ ಮತ್ತು ಕೊರೋನಾ ಪರೀಕ್ಷೆ ಜರುಗಿತು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಲೀಂಪಾಷ ಮಾತನಾಡಿ, ಆರೋಗ್ಯಕರ ಜೀವನ ಶೈಲಿ ಮತ್ತು ಆರೋಗ್ಯಕರ ಹವ್ಯಾಸಗಳ ಮೂಲಕ ದೇಹದ ರೋಗ ನಿರೋಧಕ ಶಕ್ತಿ ಬಲಪಡಿಸಿ ರೋಗಗಳಿಂದ ರಕ್ಷಣೆ ಪಡೆಯಬೇಕು ಎಂದರು.ಧೂಮಪಾನ,ಮದ್ಯಪಾನ ತ್ಯಜಿಸಬೇಕು.18 ವರ್ಷ ಮೇಲ್ಪಟ್ಟ ಎಲ್ಲರಿಗೂ ಲಸಿಕೆ ನೀಡಲಾಗುವುದು,ಲಸಿಕೆ ಬಗ್ಗೆ ಭಯವಾಗಲಿ,ಅಪನಂಬಿಕೆಯಾಗಲಿ ಬೇಡ,ಲಸಿಕೆ ಪಡೆದ ನಂತರವೂ ಮಾಸ್ಕ್ ಧರಿಸಿ ನಿಯಮ ಪಾಲಿಸಿ ಮೂರನೆ ಅಲೆಯ ಕೊರೋನಾಕ್ಕೆ ಸಿಲುಕದಂತೆ ಎಚ್ಚರಿಕೆ ವಹಿಸಿ ಎಂದರು.

ವೈದ್ಯಾಧಿಕಾರಿಗಳಾದ ಡಾ.ರೇಖಾ ಬಿ.ಎಂ ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದರು. ಗ್ರಾಮಸ್ಥರು ಕೊರೋನಾ ವಾರಿಯರ್‌ಗಳ ಸೇವೆಯನ್ನು ಶ್ಲಾಘಿಸಿ ಗೌರವಿಸಿದರು. ಗ್ರಾಮ ಪಂಚಾಯ್ತಿ ಸದಸ್ಯರಾದ ಮಂಜುನಾಥ್ ಎಂ.ಸಿ,ಮುಖಂಡರಾದ ನಿವೃತ್ತ ಮುಖ್ಯ ಶಿಕ್ಷಕರಾದ ಚನ್ನೇಗೌಡ , ಮಾಜಿ ಸದಸ್ಯರಾದ,ಬಸವೇಗೌಡ ,ಎಂ.ಬಿ.ಭರತ್ ಕುಮಾರ್, ಆರೋಗ್ಯ ಇಲಾಖೆಯ ಅಧಿಕಾರಿಗಳಾದ ಮಧುಮತಿ, ಕೆ.ಆರ್.ಸೌಮ್ಯ ರಮ್ಯ.ಆರ್,ಸಲ್ಮಾ ಜಬೀನ್,ಆಶಾಗಳಾದ ಜ್ಯೋತಿ, ವಿ.ಜಯಲಕ್ಷ್ಮಿ ,ಅಂಗನವಾಡಿ ಕಾರ್ಯಕರ್ತೆ ರೇಖಾ,ಹುಲಿಕೆರೆ ಹೇಮಂತ್ ಕುಮಾರ್ ಇತರರು ಹಾಜರಿದ್ದರು.




## ರಾಜ್ಯದಲ್ಲಿ ಅತೀ ಶೀಘ್ರವೇ ಸಿಎಂ ಬದಲಾವಣೆ ಫಲಿತಾಂಶ ಪ್ರಕಟ : ಮತ್ತೊಂದು ಬಾಂಬ್ ಸಿಡಿಸಿದ ಸಚಿವ ಯೋಗೇಶ್ವರ್

ಬೆಂಗಳೂರು : ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ನಾವೆಲ್ಲ ಪರೀಕ್ಷೆ ಬರೆದಿದ್ದೇವೆ. ಅತೀ ಶೀಘ್ರದಲ್ಲಿ ಫಲಿತಾಂಶ ಪ್ರಕಟಣೆಯಾಗಲಿದೆ ಎಂದು ಪ್ರವಾಸೋದ್ಯಮ ಸಚಿವರಾದ ಯೋಗೇಶ್ವರ ರವರು ಸುದ್ದಿಗಾರರ ಪ್ರಶ್ನೆಗೆ ಮಾರ್ಮಿಕವಾಗಿ ಹೇಳಿದ್ದಾರೆ. ಈ ಮೂಲಕ ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಬದಲಾವಣೆ ಕುರಿತಂತೆ ಮತ್ತೊಂದು ಸ್ಫೋಟಕ ಬಾಂಬ್ ಸಿಡಿಸಿದ್ದಾರೆ.

ಈ ಕುರಿತಂತೆ ಸುದ್ದಿಗಾರರೊಂದಿಗೆ ಇಂದು ಮಾತನಾಡಿದಂತ ಅವರು, ನನ್ನ ವೈಯಕ್ತಿಕ ಸಮಸ್ಯೆ ಹಾಗೂ ರಾಜ್ಯ ಸರ್ಕಾರ ಮತ್ತು ರಾಜ್ಯ ಬಿ.ಜೆ.ಪಿ. ಯ ಮೂಲಭೂತ ಸಮಸ್ಯೆಗಳ ಬಗ್ಗೆ ಹೈಕಮಂಡ್ ಗೆ ವಿವರಣೆ ನೀಡಿದ್ದೇನೆ. ಸರ್ಕಾರ ಹಾಗೂ ಪಕ್ಷದ ಮೂಲಭೂತ ಸಮಸ್ಯೆಗಳನ್ನು ಮಾಧ್ಯಮಗಳ ಮುಂದೆ ಹಂಚಿಕೊಳ್ಳಲು ಸಾಧ್ಯವಿಲ್ಲ ಎಂದಿದ್ದಾರೆ. ಏನೇ ಆಗಲಿ ಪರೀಕ್ಷೆ ಬರೆಯಲಾಗಿದ್ದು, ಅತೀ ಶೀಘ್ರದಲ್ಲಿ ಫಲಿತಾಂಶ ಪ್ರಕಟವಾಗಲಿದೆ ಎಂಬ ಖಚಿತ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಒಬ್ಬ ಜವಾಬ್ದಾರಿ ಸಚಿವನಾಗಿ ನಾನು ನನ್ನ ಕರ್ತವ್ಯಗಳನ್ನು ನಿಭಾಯಿಸುತ್ತಿದ್ದೇನೆ. ನನ್ನ ವೈಯಕ್ತಿಕ ನೋವುಗಳು ಹಾಗೂ ಸಮಸ್ಯೆಗಳನ್ನು ನಮ್ಮ ದೆಹಲಿ ನಾಯಕರ ಮುಂದೆ ಹೇಳಿದ್ದೇನೆ. ಪಕ್ಷಕ್ಕೆ ದಕ್ಕೆ ಉಂಟಾಗಬಾರದು ಹಾಗೂ ಸರ್ಕಾರಕ್ಕೆ ಮುಜುಗರವಾಗಬಾರದು ಎಂಬ ಹಿನ್ನಲೆಯಲ್ಲಿ, 4 ಗೋಡೆಗಳ ಮಧ್ಯೆ ವಿವರಣೆ ನೀಡಿದ್ದೇನೆ.



ಹಳೇ ಮೈಸೂರು ಭಾಗದಲ್ಲಿ ಪಕ್ಷ ಸಂಘಟನೆ ಮಾಡಲು ನನಗೆ ತುಂಬಾ ತೊಂದರೆಯಾಗುತ್ತಿದೆ. ಈ ಭಾಗದಲ್ಲಿ ನಮ್ಮ ಬಿ.ಜೆ.ಪಿ. ಪಕ್ಷದ ನಾಯಕರುಗಳು ಕಾಂಗ್ರೆಸ್ ಹಾಗೂ ಜೆ.ಡಿ.ಎಸ್. ಜೊತೆ ಹೊಂದಾಣಿಕೆ ಮಾಡಿಕೊಂಡು ರಾಜಕಾರಣ ಮಾಡುತ್ತಿದ್ದಾರೆ. ಅಡ್ಜೆಸ್ಟ್ ಮೆಂಟ್ ಪಾಲಿಟಿಕ್ಸ್ ಬೇಡ. ಇದಕ್ಕೆ ಕೊನೆಯಾಡಬೇಕು. ಈ ವಿಷಯದಲ್ಲಿ ರಾಜಿ ಪ್ರಶ್ನೆ ಇಲ್ಲ. ಕರ್ನಾಟಕದಲ್ಲಿ ಅತೀ ಉತ್ತಮವಾದ ಸರ್ಕಾರ ಇರಬೇಕು ಪಕ್ಷ ಸಂಘಟನೆ ಸಹ ರಾಜ್ಯದ ಇತರ ಭಾಗಗಳಂತೆ ಹಳೇ ಮೈಸೂರು ಭಾಗದಲ್ಲೂ ನಡೆಯಬೇಕು ಎಂದರು.

ನನಗೆ ಕೋಲಾರ ಜಿಲ್ಲೆ ಉಸ್ತುವಾರಿ ನೀಡುವ ಬಗ್ಗೆ ಯಾವ ಮಾಹಿತಿ ಇಲ್ಲ. ಸಧ್ಯಕ್ಕೆ ಅರಣ್ಯ ಸಚಿವ ಅರವಿಂದ ಲಿಂಬಾವಳಿ ರವರು ಇದ್ದಾರೆ. ಈ ನಿಟ್ಟಿನಲ್ಲಿ ನನಗೆ ಕೋಲಾರ ಉಸ್ತುವಾರಿ ನೀಡುವ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಇಲ್ಲ ಎಂದರು.

ನಾನು ಹಾಗೂ ರಮೇಶ್ ಜಾರಕಿಹೊಳಿ 20 ವರ್ಷದ ಸ್ನೇಹಿತರು. ಅವರ ಇತ್ತೀಚಿನ ರಾಜಕೀಯ ನಿಲುವಿನ ಬಗ್ಗೆ ನಾನು ಚರ್ಚಿಸಿಲ್ಲ. ಭೇಟಿ ಸಹ ಮಾಡಿಲ್ಲ. ರಮೇಶ್ ಜಾರಕಿಹೊಳಿ ರವರು ಮುಂಬೈ ಗೆ ಹೋಗಿ ರಾಜೀನಾಮೆ ನೀಡುವ ಬಗ್ಗೆಯೂ ನನಗೆ ಮಾಹಿತಿ ಇಲ್ಲ. ಅವರ ಪ್ರಚಲಿತ ರಾಜಕೀಯ ನಿರ್ಣಯದ ಬಗ್ಗೆ ಗೊತ್ತಿಲ್ಲ. ರಮೇಶ್ ಜಾರಕಿಹೊಳೆ ರವರು ರಾಜೀನಾಮೆ ಕೊಡುವುದಿಲ್ಲ ಎಂದು ತಿಳಿಸಿದರು.

ಕ್ರಾಂತಿಯಕಿಡಿ
ಪುಟ–04
ಭಾನುವಾರ
27 ಜೂನ್ 2021
# ಕಾಯಕಯೋಗಿ
KAYAKAYOGI-MORNING DAILY ಕನ್ನಡ ದಿನಪತ್ರಿಕೆ



ರೈತರ ವಿರೋಧಿ ಮಸೂದೆಗಳನ್ನು ಹಿಂಪಡೆಯುವಂತೆ ಒತ್ತಾಯಿಸಿ ರೈತರ ಸಂಘದ ಕಾರ್ಯಕರ್ತರು ಶಿವಪುರ ಸತ್ಯಾಗ್ರಹ ಸೌಧದ ಬಳಿ ಪ್ರತಿಭಟನೆ ನಡೆಸಿದರು.



ಕೆ.ಆರ್.ಪೇಟೆ ತಾಲ್ಲೂಕಿನ ಅಗ್ರಹಾರಬಾಚಹಳ್ಳಿ ರೈತ ಶಿವಕುಮಾರ್ ಅವರು ಕುಂಬಳಕಾಯಿಗೆ ಬೆಲೆ ಇಲ್ಲದ ಕಾರಣ, ಕುಂಬಳಕಾಯಿ ಫಸಲನ್ನು ನಾಶ ಮಾಡಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಆರೋಗ್ಯದಿಂದಿರಿ–ಸುರಕ್ಷಿತವಾಗಿರಿ, ನಾವೆಲ್ಲೂರು ಒಟ್ಟಾಗಿ ಕೊರೋನಾ ವಿರುದ್ಧ ಹೋರಾಡೋಣ.**

## ಕಾಯಕಯೋಗಿ ಮಾಸ್ಕ್ ಅಭಿಯಾನ




ಇಡೀ ವಿಶ್ವವನ್ನೇ ಬೆಚ್ಚಿಬೀಳಿಸಿರುವ ಮಹಾಮಾರಿ ಕೊರೋನಾ ತಡೆಗಟ್ಟುವುದು ಇಂದಿನ ಜರೂರು ಪರಿಸ್ಥಿತಿ.
ಪ್ರತಿಯೊಬ್ಬರು ಕಡ್ಡಾಯವಾಗಿ ಮಾಸ್ಕ್ ಧರಿಸಿ ಸೆಲ್ಫಿ ಕಳಿಸಿ ಮಾಸ್ಕ್ ತೊಟ್ಟ ನಿಮ್ಮ ಭಾವಚಿತ್ರವನ್ನು ಕಾಯಕಯೋಗಿ ಪ್ರಕಟಿಸಲಿದೆ.
ಬಿ.ಕೆ.ಅರುಣಜ್ಯೋತಿ, ಸಂಪಾದಕಿ
ಕಾಯಕಯೋಗಿ ದಿನಪತ್ರಿಕೆ,
ಮಂಡ್ಯ, ಮೊ:9980605484

**ಸರ್ಕಾರದ ನಿಯಮಾವಳಿ ಪಾಲಿಸೋಣ**
**ಮಹಾಮಾರಿ ಕರೋನಾ ಓಡಿಸೋಣ**




## ಸಸಿ ನೆಡೋಣ–ಕರೋನಾ ಓಡಿಸೋಣ



*ಇಡೀ ವಿಶ್ವವನ್ನೇ ತಲ್ಲಣಗೊಳಿಸಿರುವ ಮಹಾಮಾರಿ ಕರೋನಾ ಸೋಂಕಿನಿಂದ ಪ್ರತಿನಿತ್ಯ ಸಾವಿರಾರು ಸಾವು–ನೋವುಗಳು ಸಂಭವಿಸುತ್ತಿವೆ. ಸ್ವಾರ್ಥಕ್ಕಾಗಿ ಪರಿಸರ ನಾಶ ಮಾಡಿದ ಪರಿಣಾಮ ಆಕ್ಸಿಜನ್ ಕೊರತೆ ಮನುಷ್ಯನನ್ನು ಉಸಿರುಗಟ್ಟಿ ಸಾಯುವಂತೆ ಮಾಡಿದೆ. ಇಂತಹ ಸಂಕಷ್ಟದಿಂದ ಪಾರಗಲು ನಾಳಿನ ಭವಿಷ್ಯಕ್ಕೆ ಇಂದೇ ಸಸಿಯೊಂದನ್ನು ನೆಟ್ಟು ಮತ್ತೆ ಪ್ರಕೃತಿಯ ಮಡಿಲನ್ನು ಮತ್ತಷ್ಟು ಗಟ್ಟಿಗೊಳಿಸೋಣ. ಪ್ರತಿಯೊಬ್ಬರೂ ತಮ್ಮ ಮನೆಯಂಗಳ, ಗದ್ದೆ, ಹೊಲ, ಸರ್ಕಾರಿ ಜಾಗ, ಶಾಲಾ ಆವರಣ, ಗೋಮಾಳದಲ್ಲಿ ಸಸಿಗಳನ್ನು ನೆಟ್ಟು ಸಸ್ಯಸಂಕುಲದ ಸಮೃದ್ಧಿಗೆ ಮುಂದಾಗೋಣ.*
***ನೀವು ಸಸಿನೆಟ್ಟ ಪೋಟೋ ನಮಗೆ ವಾಟ್ಸ್‌ಪ್ ಮಾಡಿ.***
***ಮೊ : 9343230788.***

# ಸಮಾಜಕಲ್ಯಾಣ ಇಲಾಖೆಯಿಂದ ಆಹಾರಕಿಟ್

ಹಲಗೂರು : ಹೆಚ್ ಬಸಾಪುರ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಬಸವನಹಳ್ಳಿ ಗ್ರಾಮದ ಶಾಲಾ ಆವರಣದಲ್ಲಿ ತಾಲ್ಲೂಕು ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಆಹಾರ ಕಿಟ್ಟುಗಳನ್ನು ವಿತರಣೆ ಮಾಡಲಾಯಿತು.



ಶಾಸಕ ಡಾ.ಕೆ.ಅನ್ನದಾನಿ ಮಾತಾನಾಡಿ ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದುಳಿದ ಅರಣ್ಯ ಒಳಗಿರುವ ಬಸವನ ಬೆಟ್ಟದಲ್ಲಿರುವ ಬಸವನಹಳ್ಳಿ ಗ್ರಾಮದ ಜನತೆ ಕರೋನ ಎರಡನೇ ಅಲೆಯಿಂದ ರಾಜ್ಯ ವ್ಯಾಪಿ ಲಾಕ್ ಡೌನ್ ಮಾಡಲಾಗಿತ್ತು ಇದರಿಂದ ಜನ ಜೀವನ ಗಂಭೀರ ಸಮಸ್ಯೆ ಎದುರಾಗಿತ್ತು ಇಂತಹ ಸಂದರ್ಭಗಳಲ್ಲಿ ಜನತೆ ಸಹಾಯಕ್ಕೆ ನಿಲ್ಲುವುದು ನಮ್ಮ ಜವಬ್ದಾರಿಯುತ ಕರ್ತವ್ಯ ನನ್ನ ಕ್ಷೇತ್ರದಲ್ಲಿ ಎಂತಹ ಪರಿಸ್ಥಿತಿಯಲ್ಲೂ ನಿಮ್ಮೊಂದಿಗೆ ಸದಾಕಾಲವೂ ನಿಲ್ಲುತ್ತಾನೆ ಎಂದರು.

ಈ ಇದೇ ಸಂದರ್ಭದಲ್ಲಿ ಕರೋನ ಎರಡನೇ ಅಲೆಯಲ್ಲಿ ಕರೋನ ಹೆಸರಲ್ಲಿ ಕ್ಷೇತ್ರದ ಶಾಸಕರು ಲೂಟಿ ಮಾಡಿದ್ದಾರೆ ಎಂದು ಮಾಜಿ ಶಾಸಕ ನರೇಂದ್ರ ಸ್ವಾಮಿಯವರು ಆರೋಪಕ್ಕೆ ಟಾಂಗ್ ನೀಡಿದ ಶಾಸಕ ಅನ್ನದಾನಿಯವರು ತಮ್ಮ ಸ್ವ ಗ್ರಾಮವಾದ ಪೂರಿಗಾಲಿಯಲ್ಲಿ ಕರೋನ ಸುಮಾರು ಮೂವತ್ತು ಮಂದಿಗು ಹೆಚ್ಚು ಸೋಂಕು ತುಗಲಿದ್ದಾರೆ ಎಂದು ತಿಳಿದು ಸ್ವ ಗ್ರಾಮ ಬಿಟ್ಟು ಬೆಂಗಳೂರಿಗೆ ಪಲಯಾನ ಮಾಡಿದ್ದೀರಿ ಲಾಕ್ ಡೌನ್ ಅವಧಿಯಲ್ಲಿ ಕರೋನ ಸೊಂಕು ಇಳಿಮುಖ ಆಗುವವರೆಗೂ ಇತ್ತ ಮುಖ ಮಾಡಲಿಲ್ಲ ಹಾಗೂ ಕರೋನ ಸೊಂಕಿತರನ್ನ ಅಸ್ಪೃಶ್ಯರ ರೀತಿಯಲ್ಲಿ ಕಂಡಿದ್ದು, ಇಷ್ಟು ದಿನ ಎಲ್ಲಿ ಹೋಗಿದ್ದೀರಿ ಅವರ ಅಮೂಲ್ಯವಾದ ಮತ ಪಡೆದ ನೀವು ಅವರ ಯೋಗ ಕ್ಷೇಮ ವಿಚಾರಣೆ ಮಾಡದೆ ಮತ್ತು ಸಂಕಷ್ಟದ ಸಂದರ್ಭಗಳಲ್ಲಿ ನಿಲ್ಲದೆ ಕರೋನ ಸೊಂಕು ಇಳಿ ಮುಖವಾದ ನಂತರ ಕಾಣಿಸಿಕೊಂಡಿದ್ದಾರೆ.

ರಾಜ್ಯದಲ್ಲಿ ಕರೋನ ಸೊಂಕಿತರಿಗೆ ಅತ್ಮ ಸ್ಥೈರ್ಯ ತುಂಬು ಮೂಲಕ ಜೀವದ ಹಂಗು ತೊರೆದು ಕೋವಿಡ್ ನಿರ್ವಹಣೆಯಲ್ಲಿ ನಮ್ಮ ವಾರಿಯರ್ಸ್ ಜೊತೆಯಲ್ಲಿ ಹಗಲು ರಾತ್ರಿ ಎನ್ನದೆ ದುಡಿಯುತ್ತಿದ್ದೇನೆ ಇನ್ನೂ ಮುಂದೆ ನನ್ನ ಕ್ಷೇತ್ರದಲ್ಲಿ ಎಂತಹ ಗಂಭೀರ ಪರಿಸ್ಥಿತಿಯಲ್ಲೂ ನಾನು ನನ್ನ ತಾಲ್ಲೂಕು ಜನತೆ ಪರವಾಗಿ ನಿಲ್ಲುತ್ತೇನೆ ನನ್ನ ಮೇಲೆ ಆರೋಪಿಸಲು ನಿಮಗೆ ಯಾವ ನೈತಿಕತೆ ಇದೆ ಹಾಗೂ ಮಳವಳ್ಳಿಯ ಜನತೆಗು ಗೊತ್ತಿದೆ ಇವರ ಆರೋಪದಲ್ಲಿ ಯಾವುದೇ ತಿರುಳು ಇಲ್ಲ ಸತ್ಯಕ್ಕೆ ದೂರವಾಗಿದೆ ಇವರ ಈ ಘನ ಕಾರ್ಯ ಮೊಸರಲ್ಲಿ ಕಲ್ಲು ಹುಡುಕಲು ಹೊರಟಿದ್ದಾರೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ನಂಜುಂಡೆಗೌಡ, ಹಲಗೂರು ವೃತ್ತದ ಉಪ ತಹಶಿಲ್ದಾ ರ್ ಷಣ್ಮುಖ, ಗ್ರಾಮ ಲೆಕ್ಕಾಧಿಕಾರಿ, ಶಿವಶಂಕರ್, ಗ್ರಾಮ ಸಹಾಯ ಕರಾದ ಪುಟ್ಟಸ್ವಾಮಿ, ಹೆಚ್. ಬಸಪುರ ಗ್ರಾಮ ಪಂಚಾಯತಿ ಅಧ್ಯಕ್ಷ ಮಂಜುನಾಥ್, ಗ್ರಾಮ ಪಂಚಾಯತಿ ಸದಸ್ಯ ಬಿ.ಡಿ.ರಾ ಜೇಂದ್ರ, ಶಿವ ರಾಜ್, ಶಶಿಧರ್, ಜೆಡಿಎಸ್ ಹಲಗೂರು ಹೋಬಳಿಯ ಅಧ್ಯಕ್ಷ ತಮ್ಮಣ್ಣಗೌಡ ಇದ್ದರು.

## ದೊಡ್ಡವರ ಹಾದಿ ನೆನೆದು ಬದುಕಬೇಕು

ಪಾಂಡವಪುರ : ದೊಡ್ಡವರ ಹಾದಿ ಮತ್ತು ನೆರಳನ್ನು ನೆನೆದು ಬದುಕು ನಡೆಸಿದಾಗ ಮಾತ್ರ ಉತ್ತಮ ಸಮಾಜ ಕಾಣಲು ಸಾಧ್ಯ ಎಂದು ಸಾಹಿತಿ ಹಾಗೂ ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಹೇಳಿದರು.

ಗ್ರಾಮರಂಗ ಸಾಂಸ್ಕೃತಿಕ ವೇದಿಕೆ ಪಾಂಡವಪುರ ವತಿಯಿಂದ ಗೂಗಲ್ ಮೀಟ್‌ನಲ್ಲಿ ಆಯೋಜಿಸಿದ್ದ 'ದೊಡ್ಡವರ ಹಾದಿ ಮತ್ತು ನೆರಳು' ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಸಮಾಜದಲ್ಲಿ ಹಿರಿಯರನ್ನು ಗೌರವಿಸುವ, ಅವರನ್ನು ಸ್ಮರಿಸುವ ಹಾಗೂ ಅವರ ಸಾಧನೆಗಳನ್ನು ನೆನೆದು ಆ ನಿಟ್ಟಿನಲ್ಲಿ ನಡೆಯುವಂತಹ ಯುವ ಸಮೂಹ ಕ್ಷೀಣಿಸುತ್ತಿದೆ ಎಂದರು.

ದೊಡ್ಡವರ ಸಾಲಿನಲ್ಲಿ ನಾವು ನೋಡಿದಾಗ ವರನಟ ಡಾ.ರಾಜಕುಮಾರ್ ಅವರ ಬಗ್ಗೆ ಮಾತನಾಡುತ್ತಾ ಒಂದು ಸಲ ಅವರ ಅಭಿಮಾನಿಗಳು ಈ ನಾಡಿನಲ್ಲಿ ಇಷ್ಟೊಂದು ಜನಪ್ರಿಯತೆ ಗಳಿಸಿರುವ ತಾವು ರಾಜ್ಯದ ಮುಖ್ಯಮಂತ್ರಿಯಾಗಬಾರದೇಕೆ ಎಂದು ಪ್ರಶ್ನಿಸಿದಾಗ ಈಗಾಗಲೇ ಜನರು ನನ್ನನ್ನು ರಾಜನಾಗಿ ಮಾಡಿದ್ದಾರೆ. ಈಗ ರಾಜನ ಕೆಳಗಿರುವ ಮಂತ್ರಿಯಾಗಲೇ ಎಂದರಂತೆ. ಇದರಿಂದ ಗೊತ್ತಾಗುತ್ತದೆ ಯಾವುದೇ ಸ್ಥಾನಕ್ಕಿಂತ ಸಾಧನೆ ಮತ್ತು ಗೌರವ ಬಹಳ ದೊಡ್ಡದು ಎಂದರು.

ಜತೆಗೆ ಈ ನಾಡು ಕಂಡ ಜಗತ್ಪ್ರಸಿದ್ಧ ಪರಿಸರ ಪ್ರೇಮಿ ಸಾಲುಮರದ ತಿಮ್ಮಕ್ಕ. ಮಕ್ಕಳಿಲ್ಲದ ಈ ದಂಪತಿಗಳು ಮರಗಳನ್ನೇ ತನ್ನ ಮಕ್ಕಳೆಂದು ನೀರೆರೆದು ಪೋಷಿಸಿ ಮನುಷ್ಯರ ಜತೆಗೆ ಪ್ರಾಣಿ ಪಕ್ಷಿಗಳಿಗೂ ಬದುಕಲು ನೆರವಾದ ದೊಡ್ಡ ಸಾಧಕಿ ಇಂದು ವಿಶ್ವಖ್ಯಾತಿಯಾಗಿದ್ದಾರೆ ಎಂದು ತಿಳಿಸಿದರು.

ಮೈಸೂರು ವಿಶ್ವವಿದ್ಯಾನಿಲಯದ ತಳುಕಿನ ವೆಂಕಣ್ಣಯ್ಯನವರ ಬಗ್ಗೆ ಮಾತನಾಡುತ್ತಾ, ಒಂದು ಸಲ ಅವರ ಮನೆಗೆ ಅತಿಥಿಗಳು ಬಂದಾಗ ಊಟ ಮಾಡುವ ವೇಳೆ ಅವರ ಪತ್ನಿಯನ್ನು ಎಲ್ಲಿ ಎಂದು ಪ್ರಶ್ನಿಸಿದಾಗ ನನ್ನ ಮಗನ ಶವ ಸಂಸ್ಕಾರಕ್ಕೆ ಸ್ಮಶಾನಕ್ಕೆ ಹೋಗಿದ್ದಾರೆ. ಅತಿಥಿಗಳಾಗಿ ಬಂದು ಬರಿಗೈಲಿ ಹೋಗಬಾರದು, ನಿಮಗೆ ನೋವಾಗಬಾರದು ಎಂಬ ಕಾರಣಕ್ಕೆ ನಿಮ್ಮ ಅತಿಥಿ ಸತ್ಕಾರ ಮಾಡಲು ನಾನಿಲ್ಲೇ ಉಳಿದಿದ್ದೇನೆ ಎಂದು ಹೇಳಿದರಂತೆ. ಇದರಿಂದ ಗೊತ್ತಾಗುತ್ತದೆ ನಮ್ಮ ಕಷ್ಟಗಳನ್ನು ನಾವೇ ಅನುಭವಿಸಬೇಕೆ ಹೊರತು ಇನ್ನೊಬ್ಬರಿಗೆ ಕಷ್ಟ ಕೊಡಬಾರದು. ಸುಖವನ್ನು ಮಾತ್ರ ಇನ್ನೊಬ್ಬರಿಗೆ ಹಂಚಬೇಕು ಎಂದು ತಿಳಿಸಿದರು.

ಸರ್ವಪಲ್ಲಿ ರಾಧಾಕೃಷ್ಣರವರ ಬಗ್ಗೆ ಮಾತನಾಡುತ್ತಾ ಈ ನಾಡು ಕಂಡ ಶ್ರೇಷ್ಠ ಗುರುಗಳು. ಸಾವಿರಾರು ವಿದ್ಯಾರ್ಥಿಗಳನ್ನು ಹುಟ್ಟುಹಾಕಿದವರು. ಗುರುಗಳು ಎಂದರೆ ಏನು ಎಂಬುದನ್ನು ತಿಳಿಸಿಕೊಟ್ಟವರು. ಉಪರಾಷ್ಟ್ರಪತಿ, ರಾಷ್ಟ್ರಪತಿಯಾಗಿ ಈ ನಾಡಿಗೆ ಶ್ರೇಷ್ಠ ವ್ಯಕ್ತಿಯಾಗಿ ನಿಲ್ಲುತ್ತಾರೆ.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರು ಜಿಲ್ಲಾಧಿಕಾರಿಗಳಾಗಿದ್ದಾಗ ಪ್ರತಿ ಹಳ್ಳಿಗೂ ಕುಡಿಯಲು ಬಾವಿಗಳನ್ನು ತೋಡಿಸಿದರಂತೆ. ಒಮ್ಮೆ ಧರ್ಮಸ್ಥಳಕ್ಕೆ ಪ್ರವಾಸ ಹೋಗುವ ವೇಳೆ ಬಾಯಾರಿದಾಗ ಕುಡಿಯಲು ಬಾವಿ ಬಳಿ ಹೋದಾಗ ಅಲ್ಲೊಬ್ಬ ರೈತ ನೀರು ಕುಡಿಯುವ ಮೊದಲು ಒಂದು ಬಿಂದಿಗೆ ನೀರನ್ನು ಹೊರಗಡೆ ಒಂದು ತೊಟ್ಟಿಯಲ್ಲಿ ಹಾಕಿ ಇನ್ನೊಂದು ಬಿಂದಿಗೆಯಲ್ಲಿ ತೆಗೆದು ನೀರನ್ನು ಕುಡಿಯಿರಿ ಎಂದರಂತೆ. ಕಾರಣ ಕೇಳಿದಾಗ ನಮ್ಮಲ್ಲಿ ಜಿಲ್ಲಾಧಿಕಾರಿಗಳಾಗಿದ್ದ ನೀರು ಕುಡಿಯಲು ಬಾವಿಗಳನ್ನು ತೋಡಿಸಿದರು. ಮನುಷ್ಯರಂತೆ ಇತರ ಪ್ರಾಣಿ, ಪಕ್ಷಿಗಳು ನೀರು ಕುಡಿಯುವಂತಾಗಬೇಕು. ಅದಕ್ಕಾಗಿ ಒಂದು ಬಿಂದಿಗೆ ನೀರು ಪ್ರಾಣಿ–ಪಕ್ಷಿಗಳಿಗೆ, ಇನ್ನೊಂದು ಬಿಂದಿಗೆಯಲ್ಲಿ ನೀರು ಕುಡಿಯಬಹುದು ಎಂದರಂತೆ. ಇದರಿಂದ ಅವರ ಸಾಮಾಜಿಕ ಕಳಕಳಿ, ಸಮಾಜ ಸೇವೆ ಏನೆಂಬುದನ್ನು ಅವರೆ ಹೇಳಿದ ಕ್ಷಣವನ್ನು ನಾವು ಕಾಣಬಹುದು. ಹೀಗೆ ಗಾಂಧಿ ಮತ್ತು ಚರ್ಚಿಲ್‌ರವರ ಸಾಮಾಜಿಕ ಕಳಕಳಿ ಬಗ್ಗೆ ವಿವರಿಸಿದರು.

ಕಾರ್ಯಕ್ರಮದಲ್ಲಿ ಚಿಕ್ಕಮಗಳೂರಿನ ಉಪವಿಭಾಗಾಧಿಕಾರಿ ಡಾ.ಎಚ್.ಎಲ್.ನಾಗರಾಜು, ಕನ್ನಡದ ಕಬೀರ ಪದ್ಮಶ್ರೀ ಪುರಸ್ಕೃತರಾದ ಇಬ್ರಾಹಿಂ ಸುತಾರ್, ತಹಸೀಲ್ದಾರ್ ಪ್ರಮೋದ್ ಎಲ್.ಪಾಟೀಲ್, ನಿವೃತ್ತ ಜಂಟಿ ನಿರ್ದೇಶಕ ಎಂ.ಎಸ್.ಮರಿಸ್ವಾಮಿಗೌಡ, ಮಹಾಜನ ಕಾಲೇಜಿನ ಪ್ರಾಧ್ಯಾಪಕ ಎಚ್.ಆರ್.ತಿಮ್ಮೇಗೌಡ, ಸಾರ್ವಜನಿಕ ಶಿಕ್ಷಣ ಇಲಾಖೆಯ ಸಿ.ಎನ್.ಗೋಪಾಲೇಗೌಡ, ಸಾಹಿತಿ ಚಂದ್ರಶೇಖರಯ್ಯ, ವೇದಿಕೆ ಅಧ್ಯಕ್ಷ ಬಿ.ಎಸ್.ನಾಗಲಿಂಗೇಗೌಡ, ಗೌರವಾಧ್ಯಕ್ಷ ಎಂ.ರಮೇಶ್ ಬೀರಶೆಟ್ಟಹಳ್ಳಿ, ಕೋಶಾಧ್ಯಕ್ಷ ಮೇನಾಗರ ಪ್ರಕಾಶ್, ಕಾರ್ಯದರ್ಶಿ ಪ.ಮ.ನಂಜುಂಡಸ್ವಾಮಿ ಹಾಗೂ ಮೈಸೂರು, ಬೆಂಗಳೂರು, ತುಮಕೂರು, ಹಾಸನ, ಶಿವಮೊಗ್ಗ, ಕೊಪ್ಪಳ ಸೇರಿದಂತೆ ಇತರೆ ಜಿಲ್ಲೆಗಳಿಂದ 400ಕ್ಕಿಂತಲೂ ಹೆಚ್ಚು ಸಾಹಿತ್ಯ ಆಸಕ್ತರು ಭಾಗವಹಿಸಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು.

## ಕಾಯಕ ಬಂಧುಗಳ ಕಾರ್ಯಾಗಾರಕ್ಕೆ ಚಾಲನೆ




ಮಂಡ್ಯ : ಕಾಯಕ ಬಂಧು ಕಾರ್ಯಾಗಾರದಲ್ಲಿ ಮೇಟ್‌ಗಳ ಜವಾಬ್ದಾರಿ ಮತ್ತು ಕರ್ತವ್ಯಗಳು ಹಾಗೂ ಹಕ್ಕುಗಳ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ ಬಿ.ಎಸ್.ಸತೀಶ್ ತಿಳಿಸಿದರು.

ಮಳವಳ್ಳಿ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ನಡೆದ ಕಾಯಕ ಬಂಧುಗಳ ಕಾರ್ಯಾಗಾರವನ್ನು ಕಾರ್ಯನಿರ್ವಾಹಕ ಅಧಿಕಾರಿ ಬಿ.ಎಸ್. ಸತೀಶ್ ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಬಗ್ಗೆ ಮತ್ತು ಮೇಟ್ ಗಳ ಹಕ್ಕು ಮತ್ತು ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರಭಾರ ಸಹಾಯಕ ನಿರ್ದೇಶಕರಾದ ಲಿಂಗರಾಜು ರವರು ಕೃಷಿ ಕೂಲಿಗಾರರ ಸಂಘದ ಮೇಟ್‌ಗಳಿಗೆ ಮೇಟ್ ಕಾರ್ಡ್‌ನ ಮಹತ್ವದ ಬಗ್ಗೆ ತಿಳಿಸಿದರು.

ಜಿಲ್ಲಾ ಐಇಸಿ ಸಂಯೋಜಕಿ ರೇಖಾ ಕಾಯಕ ಬಂಧುಗಳ ಕರ್ತವ್ಯ ಮತ್ತು ಜವಬ್ದಾರಿ ಬಗ್ಗೆ ತಿಳಿಸಿದರು.

ಬಂಡೂರು ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳಾದ ಕುಮಾರ್ ರವರು ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಇತಿಹಾಸ ಮತ್ತು ಕೂಲಿಗಾರರ ವಿಮೆ ಬಗ್ಗೆ ತಿಳಿಸಿದರು.

ತಾಂತ್ರಿಕ ಸಹಾಯಕರಾದ ನಿತಿನ್ ಕಾಮಗಾರಿಯ ಅಳತೆ ಮತ್ತು ಅದಕ್ಕೆ ನೀಡುವ ಹಣದ ಪ್ರಮಾಣದ ಬಗ್ಗೆ ತಿಳಿಸಿದರು ಹಾಗೂ ಇದೇ ವೇಳೆ ಮೇಟ್‌ಗಳಿಗೆ ಕೋವಿಡ್– 19 ಟೆಸ್ಟ್ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಪ್ರಾಂತ ಕೃಷಿ ಕೂಲಿಗಾರರ ಸಂಘದ ಅಧ್ಯಕ್ಷರಾದ ಪುಟ್ಟಮಾದು ಮತ್ತು ಮೇಟ್‌ಗಳು, ಪಿಡಿಒ ಪಾರ್ಥಸಾರಥಿ, ಟಿ.ಸಿ.ಸುಹಾಸ್, ತಾಲೂಕು ಐಇಸಿ ಸಂಯೋಜಕರಾದ ಸುನಿಲ್ ಕುಮಾರ್.ಹೆಚ್, ಸೋಷಿಯಲ್ ಆಡಿಟರ್ ಮಹೇಶ್. ಟಿಎಇ, ಬಿಎಫ್ ಟಿ ಹಾಗೂ ತಾಲ್ಲೂಕು ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮಾದಕ ವಸ್ತು ವಿರೋಧಿ ಆಂದೋಲನ

ಮದ್ದೂರು : ಪ್ರಸ್ತುತ ದಿನಗಳಲ್ಲಿ ಯುವಕರು ಮಾದಕ ವಸ್ತುಗಳಿಗೆ ದಾಸರಾಗುವ ಮೂಲಕ ಸಮಾಜಘಾತುಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿರುವುದು ಆತಂಕಕಾರಿ ವಿಚಾರವೆಂದು ತಾಲೂಕು ಆರೋಗ್ಯಾಧಿಕಾರಿ ಡಾ. ಎಂ.ಎನ್.ಆಶಾಲತಾ ತಿಳಿಸಿದರು.

ಮದ್ದೂರು ಪಟ್ಟಣದ ಹಿಂದುಳಿದ ವರ್ಗಗಳ ಬಾಲಕಿಯರ ವಿದ್ಯಾರ್ಥಿನಿಲಯದ ಕೋವಿಡ್ ಸೆಂಟರ್‌ನಲ್ಲಿ ಆರೋಗ್ಯ ಇಲಾಖೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಾದಕ ದ್ರವ್ಯಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳು, ಮಹಿಳೆಯರು, ಯುವಕರು ಕಳ್ಳಸಾಗಾಣಿಕೆ, ಮಾದಕ ದ್ರವ್ಯಗಳ ಸೇವನೆಗೆ ದಾಸರಾಗಿ ಹಲವಾರು ವಿಧ್ವಂಸಕ ಕೃತ್ಯಗಳಲ್ಲಿ ಪಾಲ್ಗೊಂಡು ದೇಶದ ಆರ್ಥಿಕ ಹಿನ್ನೆಡೆಗೆ ಕಾರಣರಾಗುತ್ತಿದ್ದು ಇಂತಹ ಅಪಾಯಕಾರಿ ಮಾದಕ ವಸ್ತುಗಳನ್ನು ತ್ಯೆಜಿಸಿ ಸುಸಂಸ್ಕೃತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕೆಂದರು.

## ಒಲಂಪಿಕ್ : ಕ್ರೀಡಾಪಟುಗಳಿಗೆ ತಲಾ ರೂ. 10 ಲಕ್ಷ

ಮಂಡ್ಯ : ಟೋಕಿಯೋ ಓಲಂಪಿಕ್‌ಗೆ ರಾಜ್ಯದ ಐವರು ಕ್ರೀಡಾಪಟುಗಳು ಸಂಭವನೀಯ ಪಟ್ಟಿಯಲ್ಲಿ ಸ್ಥಾನಪಡೆದಿದ್ದು, ಆಯ್ಕೆಯಾಗುವ ಕ್ರೀಡಾಪಟುಗಳಿಗೆ ತಲಾ ರೂ. 10 ಲಕ್ಷ ಪ್ರೋತ್ಸಾಹ ಧನ ಘೋಷಿಸಿ ಆದೇಶ ಹೊರಡಿಸಲಾಗಿದೆ. 2020 ರ ಓಲಂಪಿಕ್ ಕ್ರೀಡಾಕೂಟವು ಜಪಾನ್ ಟೋಕಿಯೋದಲ್ಲಿ ಜುಲೈ 23 ರಿಂದ ಸೆ.5 ರ ವರೆಗೆ ನಡೆಯಲಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವ ಡಾ. ನಾರಾಯಣಗೌಡ ಈ ಸಂಬಂಧ ಅಧಿಕಾರಿಗಳ ಜೊತೆ ಸಭೆ ನಡೆಸಿದ್ದರು. ಕ್ರೀಡಾಪಟುಗಳಿಗೆ ಅಗತ್ಯ ನೆರವು ನೀಡುವುದು ಸರ್ಕಾರದ ಕರ್ತವ್ಯ. ಮೂಲಭೂತ ಸೌಕರ್ಯದ ಜೊತೆಗೆ ಆರ್ಥಿಕ ಸಹಾಯ ನೀಡುವುದು ಅತ್ಯಗತ್ಯ. ಭಾರತ ಸರ್ಕಾರ ಓಲಂಪಿಕ್ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಲಿರುವ ನಮ್ಮ ದೇಶದ ಅರ್ಹ ಕ್ರೀಡಾಪಟುಗಳ ಸಂಭವನೀಯ ಪಟ್ಟಿಯನ್ನು ಸಿದ್ಧಪಡಿಸಿದೆ. ರಾಜ್ಯದ ಈಕ್ವೆಸ್ಟ್ರಿಯನ್ ಕ್ರೀಡಾಪಟು ಓಲಂಪಿಕ್ ಗೆ ಆಯ್ಕೆಯಾಗಿದ್ದಾರೆ. ರಾಜ್ಯದ ಇನ್ನೂ ನಾಲ್ವರು ಕ್ರೀಡಾಪಟುಗಳು ಸಂಭವನೀಯ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಹೀಗಾಗಿ ಅವರಿಗೆ ಪ್ರೋತ್ಸಾಹ ಧನ ನೀಡಿ ಬೆಂಬಲಿಸಬೇಕಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಐವರೂ ಕ್ರೀಡಾಪಟುಗಳು ರಾಜ್ಯದ, ರಾಷ್ಟ್ರದ ಕೀರ್ತಿಪತಾಕೆಯನ್ನು ಜಪಾನ್ ನ ಟೋಕಿಯೋದಲ್ಲಿ ಹಾರಿಸಲಿ ಎಂದು ಸಚಿವರು ಶುಭಹಾರೈಸಿದ್ದಾರೆ.

ಮತ್ತಷ್ಟು ಕಠಿಣ ಶ್ರಮವಹಿಸಿ ಓಲಂಪಿಕ್ ನಲ್ಲಿ ಪಾಲ್ಗೊಳ್ಳಬೇಕು. ಆದ್ದರಿಂದ ತಲಾ ರೂ. 10 ಲಕ್ಷ ನೀಡಿ ಪ್ರೋತ್ಸಾಹಿಸಲು ಸಭೆಯಲ್ಲಿ ತೀರ್ಮಾನಿಸಲಾಗಿದೆ. ಅಂತೆಯೆ ರಾಜ್ಯ ಸರ್ಕಾರ ಕರ್ನಾಟಕದ ಕ್ರೀಡಾ ಪ್ರೋತ್ಸಾಹ ಧನ ಘೋಷಿಸಿ ಆದೇಶಿಸಿದೆ.

ಆಯ್ಕೆಯಾಗಿರುವ ಹಾಗೂ ಸಂಭವನೀಯ ಪಟ್ಟಿಯಲ್ಲಿ ಸ್ಥಾನ ಪಡೆದ ಕ್ರೀಡಾಪಟುಗಳು ಪೌವಾದ್ ಮಿರ್ಜಾ – ಈಕ್ವೆಸ್ಟ್ರಿಯನ್. – ಆಯ್ಕೆಯಾಗಿದ್ದಾರೆ.
ಎಸ್.ವಿ. ಸುನೀಲ್ – ಹಾಕಿ. – ಸಂಭವನೀಯ
ರೋಹನ್ ಬೋಪಣ್ಣ – ಟೆನ್ನಿಸ್. – ಸಂಭವನೀಯ
ಶ್ರೀಹರಿ ನಟರಾಜ್ – ಈಜು.– ಸಂಭವನೀಯ
ಕುಮಾರಿ ಅದಿತಿ ಅಶೋಕ್ – ಗಾಲ್ಫ್. –ಸಂಭವನೀಯ.

# ಸೂರ್ಯನಮಸ್ಕಾರ ಸರ್ವ ರೋಗಕ್ಕೂ ಅಮೃತಸಿಂಚನ

ಶರೀರ ಮಾತ್ರ ಯಾವುದೇ ಕಾಯಿಲೆಗಳಿಲ್ಲದೆ ಆರೋಗ್ಯವಾಗಿದ್ದರೆ. ಕಾಯಿಲೆಗಳಿಂದ ಮುಕ್ತಿ ಹೊಂದಿದರೆ ನಿರೋಗಿಯಾಗಿ ಜೀವಿಸಿದ್ದರೆ ಮಾತ್ರ ಆರೋಗ್ಯವಲ್ಲ.ವ್ಯಕ್ತಿ ಮಾನಸಿಕವಾಗಿಯೂ ಆರೋಗ್ಯವಾಗಿದ್ದರೆ ಮಾತ್ರ ಆರೋಗ್ಯವೇನ್ನುವುದು. ಶರೀರದ ಆಲಸ್ಯವನ್ನು ತೊರೆದು ಮನಸ್ಸಿನ ಚಿಂತೆಯನ್ನು ದೂರ ಮಾಡಿ ಶಾಂತ ಮನೋಭಾವದಿಂದ ಜೀವಿಸುವುದೇ ಆರೋಗ್ಯ.

ಇಂದಿನ ನಾಗರಿಕತೆಯಲ್ಲಿ ವಿವಿಧ ವೈವಿಧ್ಯಮಯ ಸುಖವನ್ನು ಹುಡುಕಲು ಹೊರಟ ಮನುಷ್ಯ ಅನೇಕ ರೋಗರುಜಿನಗಳಿಗೆ ಗುರಿಯಾದ. ಜೀವನದಲ್ಲಿ ಸುಖ– ದುಃಖ ಆಸೆ–ನಿರಾಸೆ ಜಯ–ಅಪಜಯ ಉಂಟಾಗುವುದು. ದುಃಖದಲ್ಲಿದ್ದಾಗ ಮನಸ್ಸು ಕು ಗ್ಗುತ್ತದೆ. ಸುಖದಲ್ಲಿದ್ದಾಗ ಮನಸ್ಸು ಹಿಗ್ಗುತ್ತದೆ. ಇದರಿಂದ ಮುಕ್ತರಾಗಿ ಮನಸ್ಸನ್ನು ಶಾಂತಿ ಸಮಾದನದಿಂದ ಕಾಪಾಡಿಕೊಳ್ಳಬೇಕಾದರೇ ಇರುವುದು ಒಂದೇ ಮಾರ್ಗ ಯೋಗಾಭ್ಯಾಸ. ಯೋಗ ಮನುಕುಲಕ್ಕೆ ಒಂದು ವರವಿದ್ದಂತೆ.

ಗೋಣಿಕ ಪುತ್ರರಾದ ಪತಾಂಜಲಿ ಮುನಿಗಳು ಭಾರತ ದೇಶಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆ ಯೋಗ ವಿದ್ಯೆ.ಇದು ಭಾರತೀಯ ಸನಾತನ ವಿದ್ಯೆ ಯೋಗಕ್ಕೆ ಹಲವಾರು ವರ್ಷಗಳ ಇತಿಹಾಸವಿದೆ. ಪತಂಜಲಿ ಮಹರ್ಷಿಗಳು ಯೋಗ ವಿದ್ಯೆಯಲ್ಲಿ ಎಂಬತ್ತುನಾಲ್ಕುಲಕ್ಷ ಆಸನಗಳನ್ನು. ಹಲವಾರು ರೀತಿಯ ಪ್ರಾಣಾಯಾಮಗಳನ್ನು.ವಿವಿಧ ರೀತಿಯ ಧ್ಯಾನ ಮಾಡುವ ಬಗೆಯನ್ನು ಪ್ರಪ್ರಥಮವಾಗಿ ಭಾರತೀಯ ಜನತೆಗೆ ತಿಳಿಸಿಕೊಟ್ಟರು. ಋಷಿಮುನಿಗಳ ಸಾಧನೆಯ ಸೋಪಾನವೇ ಯೋಗ ವಿದ್ಯೆ. ಯೋಗ ನಾಡಿನ ಜನತೆಯ ವ್ಯಕ್ತಿತ್ವದ ಯಶಸ್ಸಿನ ಮೂಲ.

ಇಂದಿನ ಪ್ರಕೃತಿಯಲ್ಲಿ ಮನುಷ್ಯ ಜಲಮಾಲಿನ್ಯ ದಿಂದಲೂ. ವಾಯು ಮಾಲಿನ್ಯ ದಿಂದಲೂ. ಪರಿಸರ ಮಾಲಿನ್ಯದಿಂದಲೂ ಹಲವಾರು ರೋಗರುಜಿನೆಗಳಿಗೆ ತತ್ತರಿಸುತ್ತಿದ್ದಾನೆ. ಒಬ್ಬರಿಂದೊಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗಕ್ಕೆ ಬಲಿಯಾಗುತ್ತಿದ್ದಾನೆ.

ಮಾಲಿನ್ಯದ ವಿರುದ್ಧ ಹೋರಾಡಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕಾದರೆ ನಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಲ್ಪ ಸಮಯವನ್ನು ಯೋಗಾಭ್ಯಾಸ ಗೋಸ್ಕರ ಮೀಸಲಾಗಿಡಬೇಕು.




"ಯೋಗಸೂತ್ರದಲ್ಲಿ ಯೋಗ ಚಿತ್ ವೃತ್ತಿ ನಿರೋಧ " ಎಂದು ಹೇಳಿದೆ. ಚಿತ್ತವೃತ್ತಿ ಎಂದರೆ ಮನಸ್ಸಿನಲ್ಲಿ ಬರುವ ಹತ್ತಾರು ಯೋಚನೆಗಳು . ಹಲವಾರು ಕಲ್ಪನೆಗಳು ಇವೆಲ್ಲವನ್ನು ದೂರಮಾಡಿ ಮನಸ್ಸನ್ನು ಶಾಂತಿಯಿಂದ ಇರುವುದೇ ಯೋಗದ ಮಹತ್ವ.

ಯೋಗ ಎನ್ನುವ ಪದ ಸಂಸ್ಕೃತದ ಮೂಲಧಾತುವಿಂದ "ಯೂಜ್" ಎಂಬ ಪದ ಕನ್ನಡದಲ್ಲಿ ಯೋಗ ಎಂದು ಪ್ರಚಲಿತಗೊಂಡಿದೆ. ಅಷ್ಟಾಂಗ ಯೋಗದಲ್ಲಿ ಎಂಟು ಹಂತಗಳಿವೆ. ಯಮ. ನಿಯಮ. ಆಸನ. ಪ್ರಾಣಾಯಾಮ. ಪ್ರತ್ಯಾಹಾರ. ಧಾರಣ. ಧ್ಯಾನ. ಸಮಾಧಿ. ಇವುಗಳನ್ನು ಮೂರು ಭಾಗಗಳಾಗಿ ವಿಂಗಡಿಸಿದ್ದಾರೆ.
ಯಮ.ನಿಯಮ.ಆಸನ – ಬಹಿರಂಗ ಯೋಗಗಳಾಗಿ
ಪ್ರಾಣಾಯಾಮ.ಪ್ರತ್ಯಾಹಾರ ಅಂತರಂಗ ಯೋಗಗಳಾಗಿ
ಧಾರಣ. ಧ್ಯಾನ. ಸಮಾಧಿ– ಅಂತರಾತ್ಮ ಯೋಗಗಳಾಗಿ ವಿಂಗಡಿಸಿದ್ದಾರೆ. ಯೋಗವೆಂಬ ಮಾರ್ಗ ಜಾತಿಭೇದ ಗಳಿಂದ ಮುಕ್ತವಾಗಿದೆ. ಎಲ್ಲಾ ವಯೋವರ್ಗದವರಿಗಾಗಿ ಹಲವಾರು ರೀತಿಯ ಯೋಗಾ ಸನಗಳು ಲಭಿಸುತ್ತದೆ. ತಮ್ಮ ಶಕ್ತಿ ಸಾಮರ್ಥ್ಯಕ್ಕೆ ಅನುಗುಣವಾಗಿ ಯೋಗಾಸನವನ್ನು ಅಭ್ಯಾಸ ಮಾಡಬಹುದು.

ಯೋಗ ಮಾಡಲು ಸೂರ್ಯೋದಯ ಸಮಯ ಸೂಕ್ತವಾಗಿದೆ. ಯೋಗದಲ್ಲಿ ಸೂರ್ಯ ನಮಸ್ಕಾರ ಪ್ರಮುಖ ಸ್ಥಾನವನ್ನು ಪಡೆದಿದೆ. ಸೂರ್ಯ ನಮಸ್ಕಾರ ಮಾಡುವುದರಿಂದ ಶರೀರದ ವಿವಿಧ ಅವಯವಗಳಿಗೆ ಹಾಗೂ ಅಂಗಗಳಿಗೆ ರಕ್ತಪರಿಚಲನೆಯಿಂದ ಪ್ರಾಣ ಶಕ್ತಿ ತುಂಬುತ್ತದೆ. ಹೀಗೆ ಯೋಗಸಾಧನೆಯಿಂದ ಬಹಿರಂಗಶುದ್ಧಿ ಜೊತೆ ಅಂತರಂಗ ಶುದ್ಧಿಯನ್ನು ಪಡೆಯಬಹುದಾಗಿದೆ. ಯೋಗಭ್ಯಾಸ ಮಾಡು ವುದಕ್ಕಿಂತ ಮುಂಚೆ ಬೆಳಗಿನ ನಿತ್ಯ ಕರ್ಮಗಳನ್ನು ಪೂರೈಸಿ.ಸಡಿಲವಾದ ಉಡುಪನ್ನು ಧರಿಸಿ. ಉಗುರುಬೆಚ್ಚಗಿನ ಎರಡು ಲೋಟ ಬಿಸಿ ನೀರನ್ನು ಕುಡಿದು. ಗಾಳಿ ಬೆಳಕಿರುವ ಶಬ್ದ ರಹಿತವಾದ ವಾತಾವರಣದಲ್ಲಿ. ಕಡ್ಡಾಯವಾಗಿ ಗುರುವಿನ ಮುಖಾಂತರ ಯೋಗಾಭ್ಯಾಸವನ್ನು ಕಲಿಯ ಬೇಕು.

ಇನ್ನು ಸೂರ್ಯ ನಮಸ್ಕಾರ ಮಾಡುವುದರಿಂದ. ದೈಹಿಕ ಆರೋಗ್ಯದ ಜೊತೆ ಮಾನಸಿಕವಾಗಿಯೂ ಸ್ಮರಣ ಶಕ್ತಿಯನ್ನು ಹೆಚ್ಚಿಸಿ. ಸಕಾರಾತ್ಮಕ ಭಾವನೆಗಳನ್ನು ಉಂಟುಮಾಡುತ್ತದೆ. ಹೀಗೆ ಇಷ್ಟೆಲ್ಲಾ ಉಪಯುಕ್ತವಾದ ಅಮೃತ ಸಿಂಚನದಂತಹ ಸೂರ್ಯನಮಸ್ಕಾರವನ್ನು ಮಾಡಿ ಸ್ಮರಣ ಶಕ್ತಿಯೊಂದಿಗೆ ದೀರ್ಘಾಯಸ್ಸನ್ನು ಪಡೆಯೋಣ. ಯೋಗದಿಂದ ರೋಗ ಮುಕ್ತರಾಗಿ ಸದೃಢ ಸಮಾಜವನ್ನು ನಿರ್ಮಾಣ ಮಾಡಲು ಸಹಕಾರಿಯಾಗೋಣ.

**"ಸರ್ವೇ ಜನ ಸುಖಿನೋ ಭವಂತು"**



**ಪ್ರೇಮ ಮಂಜುನಾಥ್**
**ಯೋಗ ಶಿಕ್ಷಕರು**
**ಹೊಳೆನರಸೀಪುರ.**

Published and Owned by : Smt ARUNA JYOTHI.B.K. From No. 292, Basaveshwara Nilaya, Basaveshwara Maarga,Kaveri Nagar, Mandya Printed by : PUTTASWAMY,9th Cross, Vinoba Road,Subash Nagar, Mandya-571401, Mandya Dist. Karnataka. Editor : ARUNA JYOTHI.B.K.